# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 205 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 01–03–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 205 | Title- Code: KARKAN 28269 | Chitradurga | Date: 01-03-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜನರ ಕಷ್ಟಗಳಿಗೆ ಬೆಸ್ಕಾಂ ನಿರಂತರ ಸ್ಪಂದಿಸಬೇಕು 2

ಸರ್ಕಾರಿ ಶಾಲೆಯಲ್ಲಿ ನಿರ್ಮಾಣವಾಗುತ್ತಿರುವ ಶೌಚಾಲಯ ಕಟ್ಟಡ ಕಳಪೆ ಕಾಮಗಾರಿ 3

ವಿಶ್ವದ ಬದುಕು ಸಂಸ್ಕೃತಿ ತಿಳಿಯಲು ಅಂತಾರಾಷ್ಟ್ರೀಯ ಚಿತ್ರೋತ್ಸವ ನೆರವಾಗುತ್ತದೆ 4



ಸುದ್ದಿ, ಜಾಹಿರಾತಿಗೆ
9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಪಕ್ಷಕ್ಕೆ ದುಡಿದವರಿಗೆ ನಿಗಮ ಮಂಡಳಿ ಭಾಗ್ಯ

# ಕೋಟೆ ನಾಡಿಗೆ 4 ನಿಗಮ ಮಂಡಳಿ

» ನಮ್ಮ ಜನ ಸಮಾಚಾರ


ಚಿತ್ರದುರ್ಗ:ರಾಜ್ಯ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಯುತ್ತಿದೆ. ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಮೇಲೆ ಶಾಸಕರಿಗೆ ನಿಗಮ ಮಂಡಳಿ ಅಧ್ಕ್ ಸ್ಥಾನವನ್ನು ನೀಡುವ ಮೂಲಕ ಸಚಿವಗಿರಿ ಆಕಾಂಕ್ಷಿಗಳಿಗೆ ಸದ್ಯಕ್ಕೆ ತಣಿಸುವ ಕೆಲಸ ಮಾಡಿದ ಕಾಂಗ್ರೆಸ್ ಈಗ ಚುನಾವಣಾ ಸಂದರ್ಭದಲ್ಲಿ ಟಿಕೆಟ್ ತ್ಯಾಗ ಮಾಡಿದವರಿಗೆ ಮತ್ತು ಪಕ್ಷಕ್ಕಾಗಿ ದುಡಿದ ಕಾಂಗ್ರೆಸ್ ಕಾರ್ಯಕರ್ತರಿಗೆ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ಒಲಿದಿವೆ . ಲೋಕಸಭೆ ಚುನಾವಣೆ ಅಧಿಕಾರ ಘೋಷಣೆ ಮಾಡಿರುವುದು ಕಾಂಗ್ರೆಸ್ ಪಾಳೆಯದಲ್ಲಿ ಉತ್ಸಾಹ ಹೆಚ್ಚಿಸಿದೆ. ಕೋಟೆ ನಾಡು ಚಿತ್ರದುರ್ಗ ಜಿಲ್ಲೆಗೆ ರಾಜ್ಯ ಸರ್ಕಾರ ಪ್ರಕಟಿಸಿರುವ ನಿಗಮ ಮಂಡಳಿಗಳಲ್ಲಿ ನಾಲ್ವರು ಕಾಂಗ್ರೆಸ್ ಮುಖಂಡರಿಗೆ ನಿಗಮ ಮಂಡಳಿಯ ಅಧಿಕಾರಿ ದೊರಕಿದೆ.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿರುವ ತಾಜ್ ಪೀರ್ ಅವರಿಗೆ ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಸ್ಥಾನ ದೊರಕಿದೆ. ಜಿಲ್ಲೆಯಲ್ಲಿ ಕಾಂಗ್ರೆಸ್ ಸಂಘಟನೆ ಮತ್ತು ಯಶಸ್ವಿಯಾಗಿ ವಿಧಾನ ಸಭೆ ಚುನಾವಣೆ ಎದುರಿಸುವ ಮೂಲಕ ಐದು ಶಾಸಕ ಸ್ಥಾನ ಕಾಂಗ್ರೆಸ್ ಗೆಲುವು ಕಂಡಿದ್ದರು. ಪಕ್ಷ ಅಧಿಕಾರಕ್ಕೆ ಬಂದ ಹಿನ್ನೆಲೆ ಸರ್ಕಾರ ನಿಗಮ ಮಂಡಳಿ ನೀಡಿದೆ. ಕೆಪಿಸಿಸಿ ಅಸಂಘಟಿತ ಕಾರ್ಮಿಕರ ವಿಭಾಗದ ರಾಜ್ಯ ಅಧ್ಯಕ್ಷರಾಗಿದ್ದ ಜಿ.ಎಸ್.ಮಂಜುನಾಥ್ ಅವರನ್ನು ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ಉಪಾಧ್ಯಕ್ಷರನ್ನಾಗಿ ಮಾಡಲಾಗಿದೆ.ಇವರು ಹೊಳಲ್ಕೆರೆ ಮೀಸಲು ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಯಾಗಿದ್ದರು. ಕಾರ್ಮಿಕರ ಕಲ್ಯಾಣಕ್ಕಾಗಿ ಅನೇಕ ಹೋರಟಗಳಲ್ಲಿ ಭಾಗವಹಿಸಿದ್ದರು. ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷರು ಸಹ ಆಗಿದ್ದು ಇದರ ಜೊತೆ ಡಿಸಿಎಂ ಡಿಕೆಶಿ ಅವರ ಶಿಷ್ಯನಾಗಿ ಪ್ರಭಾವ ಹೊಂದಿದ್ದಾರೆ.ಜಿಪಂ ಮಾಜಿ ಸದಸ್ಯರಾಗಿದ್ದ ಹೊಳಲ್ಕೆರೆಯ ಸವಿತಾ ರಘು ಅವರಿಗೆ ಸಫಾಯಿ ಕರ್ಮಾಚಾರಿ ಆಯೋಗದ ಅಧ್ಯಕ್ಷ ಸ್ಥಾನ ನೀಡಲಾಗಿದೆ. ಹೊಳಲ್ಕೆರೆ ಎಸ್ಸಿ ಮೀಸಲು ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಗೆ ಕೊನೆಯ ಕ್ಷಣದವರೆಗೂ ಮಾಜಿ ಸಚಿವ ಹೆಚ್.ಆಂಜನೇಯ ಅವರಿಗೆ ಪೈಪೋಟಿ ನೀಡಿದ್ದರು. ಭಾರತ್ ಜೋಡೋ ಪಾದಯಾತ್ರೆಯ ಸಂದರ್ಭದಲ್ಲಿ ರಾಹುಲ್ ಗಾಂಧಿ ಜೊತೆ ಹೆಜ್ಜೆ ಹಾಕಿ ಸವಿತಾ ರಘು ಅವರು ಸದ್ದು ಮಾಡಿದ್ದರು. ಇವರ ಜೊತೆಗೆ ಪತಿ ಪಿ.ರಘು ಅವರು ಸಹ ಟಿಕೆಟ್ ಆಕಾಂಕ್ಷಿ ಆಗಿದ್ದರು. ಇಬ್ಬರು ಸಹ ಸಿಎಂ ಮತ್ತು ಡಿಸಿಎಂ ಜೊತೆ ಉತ್ತಮ ಬಾಂಧವ್ಯ ಹೊಂದಿದ್ದು ಮಹಿಳಾ ಕೋಟಾದಲ್ಲಿ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ಒಲಿದಿದೆ.

ಜಿಪಂ ಮಾಜಿ ಸದಸ್ಯ, ಶ್ರೀರಾಮುಲು ವಿರುದ್ಧ ಮೊಳಕಾಲ್ಮೂರು ಕಾಂಗ್ರೆಸ್ ಅಭ್ಯರ್ಥಿಯಾಗಿದ್ದ ಡಾ.ಬಿ.ಯೋಗೀಶ್ ಬಾಬು ಅವರಿಗೆ ಕರ್ನಾಟಕ ದ್ರಾಕ್ಷರಸ ಮಂಡಳಿಯ ಅಧ್ಯಕ್ಷ ಸ್ಥಾನ ನೀಡಲಾಗಿದೆ. ಯೋಗೇಶ್ ಬಾಬು ಅವರು ವಿಧಾನ ಸಭಾ ಚುನಾವಣೆಯಲ್ಲಿ ಟಿಕೆಟ್ ಗೆ ಪಟ್ಟು ಹಿಡಿದಿದ್ದರು. ಕಳೆದ ಬಾರಿ ಪರಾಭವಗೊಂಡ ನಂತರ ಕ್ಷೇತ್ರದಲ್ಲಿ ನಿರಂತರ ಸಂಪರ್ಕ ಸಾಧಿಸುವ ಮೂಲಕ ಈ ಬಾರಿ ಟಿಕೆಟ್ ನೀಡುವ ನಿರೀಕ್ಷೆ ಇತ್ತು.ಆದರೆ ಎನ್.ವೈ. ಗೋಪಾಲಕೃಷ್ಣ ಅವರು ಕೂಡ್ಲಿಗಿ ಕ್ಷೇತ್ರ ಮತ್ತು ಬಿಜೆಪಿ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಮರಳುವ ಮೂಲಕ ಮೊಳಕಾಲ್ಮುರು ಟಿಕೆಟ್ ಪಡೆದರು.ಇದರಿಂದ ಯೋಗೇಶ್ ಬಾಬು ಅವರಿಗೆ ಚುನಾವಣೆ ಸಮಯದಲ್ಲಿ ಕೆಲಸ ಮಾಡಲು ತಿಳಿಸಿದ ವರಿಷ್ಠರು ನಿಗಮ ಮಂಡಳಿ ನೀಡಿದ್ದಾರೆ. ಜಿಪಂಸದಸ್ಯರಾಗಿದ್ದ ಮುಂಡರಗಿ ನಾಗರಾಜ್‌ಗೆ ಬಾಬು ಜಗಜೀವ□□ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನ ಲಭಿಸಿದೆ. ಇವರು ಚಿತ್ರದುರ್ಗ ಮೂಲದವರಾಗಿದ್ದಾರೆ. ಮೆಹಬೂಬ್ ಪಾಷಾ ಅವರು ಬೆಂಗಳೂರು ರಾಜಕಾರಣ ಇದ್ದರು ಇವರು ಚಿತ್ರದುರ್ಗ ಜಿಲ್ಲೆಯಲ್ಲಿ ಸಕ್ರಿಯ ರಾಜಕಾರಣದಲ್ಲಿ ಗುರುತಿಸಿಕೊಂಡಿದ್ದು ಇವರಿಗೆ ಕಂಠೀರವ ಸ್ಟುಡಿಯೋ ಅಧ್ಯಕ್ಷ ಸ್ಥಾನ ಒಲಿದು ಬಂದಿದೆ.



## ನಿವೃತ್ತ ಐಎಎಸ್ ಅಧಿಕಾರಿ ಕೆ.ಶಿವರಾಂ ನಿಧನ



1953-2024

» ಬೆಂಗಳೂರು

ಬಿಜೆಪಿ ಮುಖಂಡ, ನಟ ಕೆ ಶಿವರಾಮ್ ಹೃದಯಾಘಾತದಿಂದ ಬೆಂಗಳೂರಿನ ಆಸ್ಪತ್ರೆಗೆ ದಾಖಲಿಸಿ, ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ, ಚಿಕಿತ್ಸೆ ಫಲಿಸದೆ, 71 ವರ್ಷದ ಶಿವರಾಮ್ ಗುರುವಾರ ಮೃತಪಟ್ಟಿದ್ದಾರೆ. ಮೋದಿ ರಸ್ತೆಯ ಸ್ವಗೃಹದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ.

ಮೊದಲ ಬಾರಿಗೆ ಕನ್ನಡದಲ್ಲಿ ಐಎಎಸ್ ಪರೀಕ್ಷೆ ಬರೆದು, ಐಎಎಸ್ ಅಧಿಕಾರಿಯಾಗಿದ್ದ, ಬಿಜೆಪಿ ಮುಖಂಡ, ನಟ ಕೆ ಶಿವರಾಮ್ ಹೃದಯಾಘಾತದಿಂದ ಗುರುವಾರ ಮೃತಪಟ್ಟಿದ್ದಾರೆ. ಇವರು ಸಿನಿಮಾ, ರಾಜಕೀಯ ಹಾಗೂ ಸರ್ಕಾರದ ಉನ್ನತ ಅಧಿಕಾರಿಯಾಗಿ ನಡೆದು ಬಂದ ಹಾದಿ ಮಾದರಿಯಾಗಿದೆ.

**ಕೆ ಶಿವರಾಮ್ ನಡೆದು ಬಂದ ಹಾದಿ:** ಶಿವರಾಮ್ ಹುಟ್ಟಿದ್ದು ಏಪ್ರಿಲ್ 6, 1953ರಲ್ಲಿ. ಮೂಲತಃ ರಾಮನಗರ ಜಿಲ್ಲೆ ಉರುಗಹಳ್ಳಿಯಲ್ಲಿ. ಶಿವರಾಮ್ ಮೂಲ ಹೆಸರು ಶಿವರಾಮು ಕೆಂಪಯ್ಯ. ಪತ್ನಿ ಹೆಸರು ವಾಣಿ ಶಿವರಾಮ್. ನಾಗತಿಹಳ್ಳಿ ಚಂದ್ರಶೇಖರ್ ನಿದೇಶನದ 'ಬಾ ನಲ್ಲೆ ಮಧು ಚಂದ್ರಕೆ' ಸಿನಿಮಾದಲ್ಲಿ ನಟಿಸಿ ಕೆ ಶಿವರಾಮು ಅವರು ಕರ್ನಾಟಕದ ಮನೆ ಮಾತಾಗಿದ್ದರು.

**ಸರ್ಕಾರಿ ಅಧಿಕಾರಿಯಾಗಿ ಕೆ ಶಿವರಾಮ್:** 1985ರಲ್ಲಿ ಕೆಎಎಸ್ ಅಧಿಕಾರಿಯಾಗಿ ಆಯ್ಕೆಯಾಗಿದ್ದರು. ಬಳಿಕ, ಕನ್ನಡದಲ್ಲಿಯೇ ಐಎಎಸ್ ಪರೀಕ್ಷೆ ಬರೆದು, ಐಎಎಸ್ ಅಧಿಕಾರಿಯೂ ಆಗಿದ್ದರು. ಆ ಮೂಲಕ, ಕನ್ನಡದಲ್ಲಿ ಐಎಎಸ್ ಬರೆದು, ಅಧಿಕಾರಿಯಾದ ಮೊದಲ ಕನ್ನಡಿಗ ಎಂಬ ಹೆಗ್ಗಳಿಕೆಗೂ ಭಾಜನರಾಗಿದ್ದಾರು. 2013ರಲ್ಲಿ ಐಎಎಸ್ ಹುದ್ದೆಗೆ ರಾಜೀನಾಮೆ ನೀಡಿ, ಸ್ವಯಂ ನಿವೃತ್ತಿ ಪಡೆದ ಅವರು ಕಾಂಗ್ರೆಸ್ ಸೇರಿ, ರಾಜಕೀಯ ಆರಂಭಿಸಿದ್ದರು. ಕೆ.ಶಿವರಾಮ್ ಅವರು ರಾಜ್ಯದ ಹಲವು ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದರು.

**ನಟನಾಗಿ ಕೆ ಶಿವರಾಮ್:** 1993ರಲ್ಲಿ ಸಿನಿರಂಗಕ್ಕೆ ಎಂಟ್ರಿ ಕೊಟ್ಟಿದ್ದ ಶಿವರಾಮು ನಾಗತಿಹಳ್ಳಿ ನಿರ್ದೇಶನದ 'ಬಾ ನಲ್ಲೆ ಮಧುಚಂದ್ರಕೆ' ಸಿನಿಮಾದಲ್ಲಿ ನಾಯಕ ನಟನಾಗಿ ನಟಿಸಿದ್ದರು. ವಸಂತ ಕಾವ್ಯ, ಖಳನಾಯಕ, ಸಾಂಗ್ಲಿಯಾನ–3, ಪ್ರತಿಭಟನೆ, ಯಾರಿಗೆ ಬೇಡ ದುಡ್ಡು, ಗೇಮ್ ಫಾರ್ ಲವ್ , ಟೈಗರ್ ಸಿನಿಮಾಗಳಲ್ಲಿ ನಟಿಸಿದ್ದರು.

ರಾಜಕಾರಣಿಯಾಗಿ ಕೆ ಶಿವರಾಮ್: 2014ರ ಲೋಕಸಭಾ ಚುನಾವಣೆಯಲ್ಲಿ ವಿಜಯಪುರ ಕ್ಷೇತ್ರದಲ್ಲಿ ಸ್ಪರ್ಧಿಸಿ, ಸೋಲುಂಡಿದ್ದರು. ಬಳಿಕ, ಕಾಂಗ್ರೆಸ್ ತೊರೆದು, ಬಿಜೆಪಿ ಸೇರಿದ್ದರು. ಮಹಸಭಾ ಅಧ್ಯಕ್ಷರೂ ಆಗಿದ್ದರು.

## ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಕೂಗಿಲ್ಲ

» ಚಿತ್ರದುರ್ಗ

ರಾಜ್ಯಸಭೆ ಚುನಾವಣೆ ಫಲಿತಾಂಶ ಪ್ರಕಟಗೊಂಡ ಖುಷಿಯಲ್ಲಿ ನಮ್ಮ ಕಾರ್ಯಕರ್ತರು ವಿಧಾನಸೌಧದಲ್ಲಿ ಸೈಯದ್ ನಾಸಿರುದ್ದಿನ್ ಪರ ಜೈಕಾರಗಳನ್ನು ಕೂಗಿರುವುದನ್ನು ತಪ್ಪಾಗಿ ಅರ್ಥೈಸಿಕೊಂಡಿರುವ ಬಿಜೆಪಿ.ಯವರು ಬುಧವಾರ ಕಾಂಗ್ರೆಸ್ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದ್ದನ್ನು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಖಂಡಿಸಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕಾಂಗ್ರೆಸ್‌ನ 135 ಶಾಸಕರು ಹಾಗೂ ಪಕ್ಷೇತರರು ಸೇರಿ ಮೂವರನ್ನು ರಾಜ್ಯಸಭೆ ಸದಸ್ಯರುಗಳನ್ನಾಗಿ ಆಯ್ಕೆ ಮಾಡಿದ್ದಾರೆ.

ಸೈಯದ್ ನಾಸಿರ್‌ಹುಸೇನ್ ವಿಧಾನಸಭೆಗೆ ಬಂದಾಗ ಕಾರ್ಯಕರ್ತರು ಜೈಕಾರ ಹಾಕಿ ಸಂಭ್ರಮಪಟ್ಟರೆ ವಿನಃ ಯಾರೂ ಪಾಕಿಸ್ತಾನ ಜಿಂದಾಬಾದ್ ಎನ್ನುವ ಘೋಷಣೆ ಕೂಗಲಿಲ್ಲ. ಸೈಯದ್ ನಾಸಿರ್ ಹುಸೇನ್ ತುರುವನೂರು ಸ್ವಾತಂತ್ರ ಹೋರಾಟಗಾರರ ಕುಟುಂಬದಿಂದ ಬಂದವರು. ಇಂತಹ ದೇಶದ್ರೋಹದ ಘೋಷಣೆಗಳಿಗೆ ಆಸ್ಪದ ಕೊಡುವವರಲ್ಲ. ಹಾಗಾಗಿ ಅವರ ಬಗ್ಗೆ ಬಿಜೆಪಿ.ಯವರು ಅಪಪ್ರಚಾರ ಮಾಡುವುದನ್ನು ನಿಲ್ಲಿಸಬೇಕೆಂದು ಕಾಂಗ್ರೆಸ್ ಕಚೇರಿ ಎದುರು ಪ್ರತಿಭಟನೆ ಮಾಡಿದವರಿಗೆ ಎಚ್ಚರಿಸಿದರು.

ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಕೆ.ಎಂ. ಹಾಲಸ್ವಾಮಿ, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್‌ಕುಮಾರ್, ಡಿ.ಎನ್.ಮೈಲಾರಪ್ಪ, ಪದವೀಧರ ವಿಭಾಗದ ಮುದಸಿರ್ ನವಾಜ್ ಇನ್ನು ಮುಂತಾದವರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ ನೇಮಕಗೊಂಡಿರುವುದಕ್ಕೆ ಎಂ.ಕೆ. ತಾಜ್‌ಪೀರ್‌ರವರು ಸಿಹಿ ಹಂಚಿದರು.



ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಎನ್ನುವ ಘೋಷಣೆ ಯಾರು ಕೂಗಿಲ್ಲ. ಪತ್ರಿಕಾಗೋಷ್ಠಿಯಲ್ಲಿ ಎಂ.ಕೆ.ತಾಜ್‌ಪೀರ್ ಸಮರ್ಥನೆ.

## ಬಾರ್ ಅಂಡ್ ರೆಸ್ಟೋರೆಂಟ್ ಬಂದ್ ಮಾಡುವಂತೆ ಪ್ರತಿಭಟನೆ




» ಚಿತ್ರದುರ್ಗ

ಉಮಾಪತಿ ಸಮುದಾಯ ಭವನದಲ್ಲಿರುವ ಕಾರ್ತಿಕ್ ರೆಸಿಡೆನ್ಸಿ ಬಾರ್ ಅಂಡ್ ರೆಸ್ಟೋರೆಂಟನ್ನು ಬಂದ್ ಮಾಡಿ ಇಲ್ಲವೇ ಸ್ಥಳಾಂತರಿಸುವಂತೆ ಒತ್ತಾಯಿಸಿ ಸಾಮಾಜಿಕ ಸಂಘರ್ಷ ಸಮಿತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು. ಕಳೆದ ನಲವತ್ತು ವರ್ಷಗಳ ಹಿಂದೆ ದಲಿತ ಸಂಘರ್ಷ ಸಮಿತಿ ಸಂಸ್ಥಾಪಕರಾದ ಪ್ರೊ.ಬಿ.ಕೃಷ್ಣಪ್ಪ ಮುಂದಾಳತ್ವದಲ್ಲಿ ರಾಜ್ಯಾದ್ಯಂತ ಹೆಂಡ ಬೇಡ ಸಾರಾಯಿ ಬೇಡ ಹೋಬಳಿಗೊಂದು ವಸತಿ ಶಾಲೆ ಕೊಡಿ ಎಂಬ ಘೋಷ ವಾಕ್ಯದೊಂದಿಗೆ ಹೋರಾಟ ಮಾಡಿದ ಪ್ರತಿಫಲವಾಗಿ ಹೆಂಡ ಸರಾಯಿ ನಿಂತು ವಸತಿ ಶಾಲೆಗಳು ಆರಂಭಗೊಂಡಿವೆ ಎಂಬುದನ್ನು ಪ್ರತಿಭಟನಾಕಾರರು ಈ ಸಂದರ್ಭದಲ್ಲಿ ಜಿಲ್ಲಾಡಳಿತದ ಗಮನ ಸೆಳೆದರು.

ಪುಟ 2

**ಪ್ರಮುಖ ಸುದ್ದಿ**

### ಚಿತ್ರದುರ್ಗದಲ್ಲಿ ಸಂತ ಸೇವಾಲಾಲ್‌ರಅದ್ದೂರಿ ಮೆರವಣಿಗೆ

# ಲಂಬಾಣಿಗರು ಸಾಮಾಜಿಕ ಅಭಿವೃದ್ಧಿಯಾಗಬೇಕು

» ಚಿತ್ರದುರ್ಗ

ದಲಿತ ಸಮುದಾಯದ ಭಾಗವಾಗಿರುವ ಲಂಬಾಣಿಜನಾಂಗ ಸಾಮಾಜಿಕ ವ ುತ್ು ಆರ್ಥಿಕವಾಗಿಅಭಿವೃದ್ಧಿಂು 'ಾಗಬೇಕೆಂದು ಮಾಜಿ ಸಚಿವ ಹೆಚ್. ಆಂಜನೇಯ ಹೇಳಿದರು. ತ.ರಾ.ಸು. ರಂಗವಂುದಿರದಲ್ಲಿಕರ್ನಾಟಕ ಬಂಜಾರಜನಜಾಗೃತಿಅಭಿಯಾನ ಸಮಿತಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ, ಸಂತ್ ಸೇವಲಾಲ್‌ರ 285ನೇಯ ಜಯಂತ್ಯೋತ್ಸವ ಹಾಗೂ ಗಣ್ಯರಿಗೆಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಲಂಬಾಣಿ ಸಮುದಾಯಆರ್ಥಿಕ,ಸಾಮಾಜಿಕ,ಶೈಕ್ಷಣಿಕ ಮತ್ತುರಾಜಕೀಯವಾಗಿ ಹಿಂದುಳಿದ ಸಮುದಾಯವಾಗಿದ್ದು, ದಲಿತರಿಗೂ ಮತ್ತು ಲಂಬಾಣಿಗರಿಗೂಅಂತಹದೊಡ್ಡ ವ್ಯತ್ಯಾಸವೇನೂಇಲ್ಲ. ಎರಡೂ ಸಮುದಾಯಗಳು ಸಹೋದರ ಸಮುದಾಯಗಳಾಗಿದ್ದು, ಜೊತೆ-ಜೊತೆಯಲ್ಲಿ ಬದುಕುವಂತಹ ವಾತಾವರಣ ನಿರ್ಮಾಣವಾಗಬೇಕು, ಆಗ ಎಲ್ಲಾ ಶೋಷಿತ ಸಮುದಾಯಗಳು ಒಗ್ಗಟ್ಟಾಗಿರಾಜಕೀಯ ಶಕ್ತಿಪಡೆದುಕೊಳ್ಳಲು ಸಾಧ್ಯವಿದೆಎಂದರು.

ಲಂಬಾಣಿ ಸಮುದಾಯದ ಹಿರಿಯ ಮುಖಂಡರಾದಎನ್. ಜಯದೇವನಾಯ್ಕ್ ಮತ್ತುರಾಘವೇಂದ್ರ ನಾಂುಕ್ಇವರಿಗೆ ರಾಜಕೀಂುದಲ್ಲಿ ಸ್ಥಾನ ಮಾನಗಳ ಅಗತ್ಯವಿದ್ದು, ನಾನು ಮುಖ್ಯಮಂತ್ರಿ ಸಿದ್ಧರಾಮಯ್ಯನವರ ಜೊತೆಗೆಮಾತನಾಡಿನಿಗಮಮಂಡಳಿಗಳಿಗೆ ನೇಮಕ ಮಾಡಿಕೊಳ್ಳುವಂತೆ ಗಮನ ಸೆಳೆಯುವುದಾಗಿ ಹೆಚ್.ಆಂಜನೇಯ ಭರವಸೆ ನೀಡಿದರು.

ಮಾಜಿ ಸಂಸದ ಬಿ.ಎನ್. ಚಂದ್ರಪ್ಪ ಮಾತನಾಡಿ, ಪರಿಶಿಷ್ಟ ಜಾತಿ ಮತ್ತು ವರ್ಗದಜನರು ಸಾಮಾಜಿಕ ವ ುತ್ತುಆರ್ಥಿಕಅಭಿವೃದ್ಧಿಗಾಗಿಒಂದಾಗಬ 'ೇಕಾಗಿದ್ದು, ಪರಿಶಿಷ್ಟ ಜಾತಿ 101ಜನರು ಶಿಕ್ಷಣ ಪಡೆದುಕೊಳ್ಳುವ ಮೂಲಕ ಸಮಾಜ ಮುಖ್ಯವಾಹಿನಿಯಲ್ಲಿ ಗುರುತಿಸಿಕೊಳ್ಳಬೇಕಾದ ಅನಿವಾರ್ಯತೆಇದೆಎಂದು ಹೇಳಿದರು. ಪರಿಶಿಷ್ಟ ಜಾತಿಜನರು ರಾಜಕೀಯವಾಗಿಒಗ್ಗಟ್ಟಾಗಿ ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕಾದ ದಿನಗಳು ಮುಂದಿದ್ದು,ತಮ್ಮತೀರ್ಮಾನವೇಅಂತಿಮ ವಾಗಿದ್ದುಇಂತಹ ಸಂದರ್ಭದಲ್ಲಿ ಶೋಷಿತ ಜನಾಂಗಗಳೆಲ್ಲ ಒಂದಾಗಬೇಕೆಂದು ಮನವಿ ಮಾಡಿದರು.

ಸಮಾರಂಭದಲ್ಲಿ ಹಿರಿಯ ಪತ್ರಕರ್ತಟಿ.ಕೆ.ಬಸವರಾಜ್, ತಿಪ್ಪೇಸ್ವಾಮಿ ಸಂಪಿಗೆ, ಹೆಚ್. ಲಕ್ಷ್ಮಣ್, ಮಹಮ್ಮದ್ ಹನೀಫ್, ಮಹಮ್ಮದಿ ಇವರುಗಳನ್ನು ಸನ್ಮಾನಿಸಲಾಯಿತು. ಸಮಾರಂಭದಲ್ಲಿ ವಿಮುಕ್ತಿ ವಿದ್ಯಾಸಂಸ್ಥೆಯ ನಿರ್ದೇಶಕರಾದಅರ್.ವಿಶ್ವಸಾಗರ್, ಸಂತ ಸೇವಲಾಲ್‌ಕುರಿತುಉಪನ್ಯಾಸ ನೀಡಿದರು. ಸ್ಫೂರ್ತಿ ಸಂಸ್ಥೆಯ ಸಿ.ಇ.ಓ. ಕೆ.ಬಿ. ರೂಪಾನಾಯ್ಕ್, ಚಳ್ಳಕೆರೆ ತಾಲ್ಲೂಕು ಕೃಷಿ ಪತ್ತಿನ ಸಹಕಾರ ಬ್ಯಾಂಕ್‌ನಅಧ್ಯಕ್ಷರಾದ ಶ್ರೀಮತಿ ಗೀತಾ ಹನುಮಂತ ನಾಯ್ಕ್, ಭಾಗ್ಯಾ ಬಾಯಿ, ಹೊಳಲ್ಕೆರೆ ತಾಲ್ಲೂಕು ಬಂಜಾರ ಸಂಘದಅಧ್ಯಕ್ಷ ಲೋಕೆಶ್ ನಾಯ್ಕ್, ಚಳ್ಳಕೆರೆ ತಾಲ್ಲೂಕು ಮುಖಂಡರಾದ ವಲಸೆ ಶಂಕರನಾಯ 'ಕ್ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಸಂತ ಸೇವಲಾಲ್‌ರವರ 285ನೇ ಜಯಂತ್ಯೋತ್ಸವದ ಸಮಾರಂಭದಅಧ್ಯಕ್ಷತೆಯನ್ನು ಸಂತ ಸೇವಾಲಾಲ್‌ಜನ್ಮಸ್ಥಾನ ಮಹಾಮಠ ಸಮಿತಿಯ ಪ್ರಧಾನ ಕಾರ್ಯದರ್ಶಿ ನರೇನಹಳ್ಳಿ ಅರುಣ್‌ಕುಮಾರ್‌ಅಧ್ಯಕ್ಷತೆ ವಹಿಸಿದ್ದರು.ಸಮಾರಂಭದಲ್ಲಿತಿಪ್ಪೇಶ್‌ನಾಯ್ಕ್‌ಚನ್ನಯ್ಯನ 'ಹಟ್ಟಿ, ಅನಿಲ್ ಭೀಮಸಮುದ್ರ, ಜಿ.ಎಸ್.ಟಿ. ಚಂದ್ರು, ಗಣೇಶ್ ನಾಯ್ಕ್, ಡಾ|| ಈಶ್ವರ್ ನಾಯ್ಕ್, ಎಲ್. ರಮೇಶ್‌ನಾಯ್ಕ್, ಉಪಸ್ಥಿತರಿದ್ದರು. ಕರ್ನಾಟಕ ಬಂಜಾರ ಜನಜಾಗೃತಿಅಭಿಯಾನ ಸಮಿತಿಯ ಪ್ರಧಾನ ಕಾರ್ಯದರ್ಶಿ ಆರ್.ನಿಂಗಾ ನಾಯ್ಕ್‌ಕಾರ್ಯಕ್ರಮದಲ್ಲಿ ನಿರೂಪಿಸಿ ಸ್ವಾಗತಿಸಿದರು.

ಬೆಳಗ್ಗೆ 10 ಗಂಟೆಗೆ ಶ್ರೀ ನೀಲಕಂಠೇಶ್ವರದೇವಸ್ಥಾನದಿಂದ ಸಂತ ಸೇವಲಾಲ್ ಮಹಾರಾಜರ 285ನೇ ಜಯಂತ್ಯೋತ್ಸವದ ಮೆರವಣಿಗೆಯನ್ನು ಭಯಾಗಡ್ ಮಹಾಮಠದ ಮಠ್ ಸಮಿತಿಯಅಧ್ಯಕ್ಷರಾದಎನ್. ಹನುಮಂತ ನಾಯ್ಕ್ ಚಾಲನೆ ನೀಡಿದರು.ಚಿತ್ರದುರ್ಗ, ಚಳ್ಳಕೆರೆ, ಹೊಳಲ್ಕೆರೆ ಭಾಗದಿಂದ ಆಗಮಿಸಿದ್ದ ಭಕ್ತಾದಿಗಳು ಮೆರವಣಿಗೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಿದರು.



## ಫಾಸ್ಟ್ ನ್ಯೂಸ್

### ಕಡ್ಲೇಬಾಳು: ಶ್ರೀ ನಾಗಸುಬ್ರಹ್ಮಣ್ಯೇಶ್ವರ ಸ್ವಾಮಿ ದೇವಾಲಯದ ವಾರ್ಷಿಕೋತ್ಸವ



» ದಾವಣಗೆರೆ

ಇಲ್ಲಿಗೆ ಸಮೀಪದ ಶ್ರೀ ಕ್ಷೇತ್ರ ಕಡ್ಲೇಬಾಳು ಗ್ರಾಮದ ಶ್ರೀ ನಾಗಸುಬ್ರಹ್ಮಣ್ಯೇಶ್ವರ ಸ್ವಾಮಿ ದೇವಾಲಯದಲ್ಲಿ ದೇವಸ್ಥಾನದ 6ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮವು ಇದೇ ದಿನಾಂಕ 14 ಮತ್ತು 15ರಂದು ನಡೆಯಲಿದೆ. ದಿನಾಂಕ 14ರ ಗುರುವಾರ ಪ್ರಾತಃಕಾಲ ಗುರು ಗಣಪತಿ ಪ್ರಾರ್ಥನೆ, ಗಣಪತಿ ಹೋಮ, ನಾಗರಾಜ ಮೂಲಮಂತ್ರ ಹೋಮ, ಪೂರ್ಣಾಹುತಿ, ತೀರ್ಥಪ್ರಸಾದ ವಿನಿಯೋಗ, ಅನ್ನ ಸಂತರ್ಪಣೆ, ಸಂಜೆ ಮಂಗಳಾರತಿ ಜರುಗಲಿದೆ.ದಿನಾಂಕ 15ರ ಶುಕ್ರವಾರ ಪ್ರಾತಃಕಾಲ ಶ್ರೀ ನಾಗಸುಬ್ರಹ್ಮೇಶ್ವರ ಸ್ವಾಮಿಗೆ ವಿಶೇಷ ಪಂಚಾಮೃತಾಭಿಷೇಕ, ಪವಮಾನ ಅಭಿಷೇಕ, ರುದ್ರಾಭಿಷೇಕ, ವಿಶೇಷ ಅಲಂಕಾರ, ಸಾಮೂಹಿಕ ಆಶ್ಲೇಷ ಬಲಿಪೂಜೆ, ಮಹಾಪೂರ್ಣಾಹುತಿ, ರಥೋತ್ಸವ, ಅನ್ನ ಸಂತರ್ಪಣೆ ಆಯೋಜನೆಗೊಂಡಿದೆ. ಈ ಎಲ್ಲಾ ಕಾರ್ಯಕ್ರಮಗಳ ದಿವ್ಯ ಸಾನ್ನಿಧ್ಯವನ್ನು ಬೆಂಗಳೂರು ಚಾಮರಾಜಪೇಟೆಯ ಅವಿಚ್ಛಿನ್ನ ಪರಂಪರಾ ಕೂಡ್ಲಿ ಶೃಂಗೇರಿ ಮಹಾಸಂಸ್ಥಾನದ ಶ್ರೀ ಮಜ್ಜಗದ್ಗುರು ಶಂಕರಾಚಾರ್ಯ ಶ್ರೀ ವಿದ್ಯಾವಿಶ್ವೇಶ್ವರ ಭಾರತಿ ಮಹಾಸ್ವಾಮೀಜಿ ವಹಿಸುವರು.

### ಬಾರ್ ಅಂಡ್ ರೆಸ್ಟೋರೆಂಟ್ ಬಂದ್ ಮಾಡುವಂತೆ ಪ್ರತಿಭಟನೆ

» ಮೊದಲ ಪುಟದಿಂದ

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಸಾಮಾಜಿಕ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷ ಪ್ರೊ.ಸಿ.ಕೆ.ಮಹೇಶ್ ಮಾತನಾಡಿ ಜೆಜೆ.ಹಟ್ಟಿಯಲ್ಲಿ ದಲಿತರೆ ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿದ್ದು, ಕುಡಿತಕ್ಕೆ ಬಲಿಯಾಗಿ ಇಡಿ ಕುಟುಂಬವನ್ನೇ ಆತಂಕಕ್ಕೆ ತಳ್ಳುತ್ತಿದ್ದಾರೆ. ದಿನನಿತ್ಯವೂ ಮದ್ಯ ಸೇವಿಸಿ ಮನೆಗೆ ಬಂದು ಹೆಂಡತಿ ಮಕ್ಕಳ ಮೇಲೆ ಹಲ್ಲೆ ನಡೆಸುವುದು ಪರಿಪಾಠವಾಗಿದೆ. ಈ ನಿಟ್ಟಿನಲ್ಲಿ ಕಾರ್ತಿಕ್ ರೆಸಿಡೆನ್ಸಿ ಬಾರ್ ಅಂಡ್ ರೆಸ್ಟೋರೆಂಟನ್ನು ಬಂದ್ ಮಾಡಬೇಕು. ಇಲ್ಲವೇ ಇಲ್ಲಿಂದ ಸ್ಥಳಾಂತರಿಸಬೇಕೆಂದು ಆಗ್ರಹಿಸಿದರು.

ಸಾಮಾಜಿಕ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಕೆ.ಕುಮಾರ್, ಪ್ರಧಾನ ಕಾರ್ಯದರ್ಶಿ ಸಿ.ಚಿಕ್ಕಣ್ಣ, ಹೊಳೆಯಪ್ಪ, ಡಿ.ದುರುಗೇಶಪ್ಪ ಹಾಗೂ ಜೆಜೆ. ಹಟ್ಟಿಯ ಅನೇಕ ಮಹಿಳೆಯರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

### ಬಾಪೂಜಿ ಪಬ್ಲಿಕ್ ಸ್ಕೂಲ್‌ನಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ.



» ಚಿತ್ರದುರ್ಗ

ಮಕ್ಕಳಲ್ಲಿ ವಿಜ್ಞಾನ ಕುರಿತು ಸಂಶೋಧನಾ ಮನೋಭಾವನೆ ಬೆಳೆಸುವ ಹೊಣೆಗಾರಿಕೆ ಶಿಕ್ಷಕರುಗಳ ಮೇಲಿದೆ ಎಂದು ಡಿ.ಆರ್.ಡಿ.ಓ. ದ ಡಾ.ರಾಘವೇಂದ್ರ ಕರೆ ನೀಡಿದರು. ರಾಷ್ಟ್ರೀಯ ಹೆದ್ದಾರಿ-13 ರಲ್ಲಿರುವ ಬಾಪೂಜಿ ಪಬ್ಲಿಕ್ ಸ್ಕೂಲ್‌ನಲ್ಲಿ ಬುಧವಾರ ನಡೆದ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು. ಮುಂದಿನ ದಿನಗಳಲ್ಲಿ ಮಕ್ಕಳು ವಿಜ್ಞಾನಿಗಳಾಗಿ ಹೊರ ಹೊಮ್ಮಬೇಕಾದರೆ ಚಿಕ್ಕಂದಿನಿಂದಲೇ ವಿಜ್ಞಾನದ ಕುರಿತು ಆಸಕ್ತಿ ಮೂಡಿಸಬೇಕು ಎಂದು ಹೇಳಿದರು. ಸಂಸ್ಥೆಯ ರುದ್ರಪ್ಪ ಮಾತನಾಡಿ ವಿಜ್ಞಾನ ತಂತ್ರಜ್ಞಾನ ಎಲ್ಲಾ ಕ್ಷೇತ್ರದಲ್ಲೂ ಹಾಸು ಹೊಕ್ಕಾಗಿರುವುದರಿಂದ ಮಕ್ಕಳಿಗೆ ವಿಜ್ಞಾನದ ಕುರಿತು ಆಸಕ್ತಿ ಮೂಡಿಸಬೇಕು ಎಂದು ತಿಳಿಸಿದರು. ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಕೆ.ಎಂ.ವೀರೇಶ್, ನಿರ್ದೇಶಕ ಕೆ.ಎಂ.ಚೇತನ್, ಸಂಯೋಜಕರಾದ ಶಿವಕುಮಾರ್ ಇವರುಗಳು ಮಾತನಾಡಿದರು.

# ಜನರ ಕಷ್ಟಗಳಿಗೆ ಬೆಸ್ಕಾಂ ನಿರಂತರ ಸ್ಪಂದಿಸಬೇಕು

## ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದ ಮಧ್ಯೆ ಸಾಮರಸ್ಯತೆ ಆದ್ಯತೆ ನೀಡಿ: ರಾಮಚಂದ್ರ ಡಿ.ಸುತಾರ್

» ಚಳ್ಳಕೆರೆ

ಹಿರಿಯೂರು ಬೆಸ್ಕಾಂ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ರಾಮಚಂದ್ರ ಡಿ.ಸುತಾರ್‌ರವರಿಗೆ ಬೆಸ್ಕಾಂನ ದಾವಣಗೆರೆ ವೃತ್ತದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಂಘಟನಾ ಕಾರ್ಯದರ್ಶಿಯಾಗಿ ಆಯ್ಕೆ ಮಾಡಿದ್ದು, ಚಳ್ಳಕೆರೆ ಬೆಸ್ಕಾಂ ವಿಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಅವರನ್ನು ಕಚೇರಿಯಲ್ಲಿ ಸನ್ಮಾನಿಸಿ, ಅಭಿನಂದಿಸಿದರು.

ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಎನ್.ಎಸ್.ರಾಜು ಮಾತನಾಡಿ, ರಾಮಚಂದ್ರ ಡಿ.ಸುತಾರ್ ಕಳೆದ ಹಲವಾರು ವರ್ಷಗಳಿಂದ ತಮ್ಮ ವೃತ್ತಿಯ ಜೊತೆಗೆ ಬೆಸ್ಕಾಂ ನೌಕರರ ಕಷ್ಟಸುಖಗಳ ಬಗ್ಗೆ ಮಾಹಿತಿ ಪಡೆದು ಅಧಿಕಾರಿ ವರ್ಗಕ್ಕೆ ನೀಡುತ್ತಿದ್ದರು. ಇವರ ಪ್ರಾಮಾಣಿಕ ಸೇವೆಯನ್ನು ಗಮನಿಸಿ



ಇವರಿಗೆ ಸಂಘಟನಾ ಕಾರ್ಯದರ್ಶಿ ಹುದ್ದೆ ನೀಡಿರುವುದು ಸಂತಸ ತಂದಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿ ನೂತನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಂಘಟನಾ ಕಾರ್ಯದರ್ಶಿ ರಾಮಚಂದ್ರ ಡಿ.ಸುತಾರ್, ಕಳೆದ ಹಲವಾರು ವರ್ಷಗಳಿಂದ ಬೆಸ್ಕಾಂ ಇಲಾಖೆಯಲ್ಲಿ ರಾಜ್ಯದ ವಿವಿಧ ಭಾಗಗಳಲ್ಲಿ ಕಾರ್ಯನಿರ್ವಹಿಸಿದ್ದೇನೆ. ನೌಕರರು ಮತ್ತು ಅಧಿಕಾರಿಗಳ ಮಧ್ಯೆ ಸೌಹಾರ್ಧತೆ ಇದ್ದಲ್ಲಿ ಮಾತ್ರ ಕೆಲಸ ಕಾರ್ಯಗಳು ಸುಗಮವಾಗಿ ನಡೆಯುತ್ತವೆ. ನನಗೆ ನೀಡಿರುವ ಹೊಸ ಜವಾಬ್ದಾರಿಯಲ್ಲಿ ನೌಕರರ ಹಿತವನ್ನು ಪೂರ್ಣಪ್ರಮಾಣದಲ್ಲಿ ಕಾಪಾಡುವ ಭರವಸೆ ನೀಡಿದರು. ಕಚೇರಿಯಲ್ಲಿ ಕೆಲಸ ಮಾಡುವ ಸಿಬ್ಬಂದಿ ಹಾಗೂ ಅಧಿಕಾರಿಗಳ ಹಿತಕಾಯಲು ನಾನು ಸದಾಸಿದ್ಧ. ನನ್ನ ವ್ಯಾಪ್ತಿಯಲ್ಲಿ ಎಲ್ಲೇ ಸಮಸ್ಯೆ ಕಂಡುಬಂದರೂ ನಾನು ಹಾಜರಾಗಿ ಕೆಲಸ ಮಾಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಹಿರಿಯ ಇಂಜಿನಿಯರ್ ಈ.ಶಿವಕುಮಾರ್, ಕಿರಿಯ ಇಂಜಿನಿಯರ್‌ಗಳಾದ ದೇವರಾಜು, ಧನಂಜಯ, ಎಸ್.ಎನ್. ಅರುಣ್‌ಕುಮಾರ್, ಸಿ.ನಾಗರಾಜು, ಪಾಲಣ್ಣ, ವೆಂಕಟೇಶ್, ಸಚಿನ್, ಶಿವಣ್ಣ, ಕರಿಬಸವಯ್ಯ ಉಪಸ್ಥಿತರಿದ್ದರು.

# ಸರ್ಕಾರಿ ನೌಕರರು ಮಾನಸಿಕ ಒತ್ತಡದಿಂದ ಸಮಸ್ಯೆ ಹೆಚ್ಚು: ರಾಮಚಂದ್ರ ಸುತಾರ್

» ಹಿರಿಯೂರು

ಸರ್ಕಾರಿ ನೌಕರರು ಕೆಲಸದ ಒತ್ತಡದಿಂದಾಗಿ ಮಾನಸಿಕ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ ಎಂದು ಬೆಸ್ಕಾಂನ ಎಇಇ ರಾಮಚಂದ್ರ ಸುತಾರ್ ತಿಳಿಸಿದರು.

ತಾಲ್ಲೂಕಿನ ರಂಗನಾಥಪುರ ಶಾಖೆಯ ಕಿರಿಯ ಎಂಜಿನಿಯರ್ ಎಸ್. ಪಾಲಯ್ಯ ಅವರ ವಯೋ ನಿವೃತ್ತಿ ಸಂಬಂಧ ಹೊಸಯಳನಾಡು ಅಲ್ಲಿಪೀರ್ ಆಶ್ರಯದಲ್ಲಿ ಫೆಬ್ರವರಿ 29ರಂದು ಏರ್ಪಡಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದರು. ವಿದ್ಯುತ್ ಕಂಪನಿ ನೌಕರರು ರೈತರೊಂದಿಗೆ ಉತ್ತಮ ಸಂಬಂಧ ಹೊಂದಿದಾಗ ಮಾತ್ರ ಸುಗಮವಾಗಿ ಕಾರ್ಯನಿರ್ವಹಿಸಲು ಸಾಧ್ಯ. ರೈತ ಕುಟುಂಬದಿಂದ ಬಂದ ಅವರು ರೈತರ ಸಮಸ್ಯೆ ಅರಿತು ಕೆಲಸ ಮಾಡಿದ್ದಾರೆ.

ಆ ಕೆಲಸವನ್ನು ನಿವೃತ್ತಿ ಆಗುತ್ತಿರುವ ಎಸ್.ಪಾಲಯ್ಯ ಯಶಸ್ವಿಯಾಗಿ ನಿರ್ವಹಿಸಿದ್ದಾರೆ. ನಿವೃತ್ತಿ ಸಮಯದ ಕೊನೆ ದಿನದವರೆಗೂ ಅವರು ಕಚೇರಿ ಕೆಲಸಕ್ಕೆ ಬಂದರು. ಅವರದ್ದು





ಸೌಜನ್ಯನ ನಡವಳಿಕೆ. ಇಲಾಖೆ ಸೌಲಭ್ಯಗಳನ್ನು ನಿವೃತ್ತ ಜೀವನಕ್ಕೆ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ರೈತ ಮುಖಂಡ ಆರನಕಟ್ಟೆ ಶಿವಕುಮಾರ್, ನಿವೃತ್ತ ಬಂದೀಖಾನೆ ಅಧಿಕಾರಿ ಹರ್ತಿಕೋಟೆ ವೀರೇಂದ್ರ ಸಿಂಹ, ಪುಟ್ಟರಂಗಪ್ಪ ಮಾತನಾಡಿದರು.

ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಪೀರ್ ಸಾಬ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಿವೃತ್ತಿ ಹೊಂದಿದ ಕಿರಿಯ ಎಂಜಿನಿಯರ್ ಎಸ್.ಪಾಲಯ್ಯ ಮತ್ತು ಅವರ ಪತ್ನಿಯನ್ನು ಸನ್ಮಾನಿಸಲಾಯಿತು. ಸಭೆಯಲ್ಲಿ ಎಇಇ ಮಹಾವೀರ್ ಜೈನ್, ರವಿ, ಕೊಟ್ರೇಶ್, ಪಿಟ್ಲಾಲಿ ರವಿ, ಸಿದ್ದರಾಮಣ್ಣ, ಚೇತನ್, ಶ್ರೀರಂಗಪ್ಪ, ಮಲ್ಲಿಕಾರ್ಜುನ್ ಇತರರು ವೇದಿಕೆಯಲ್ಲಿದ್ದರು.

# ಐವತ್ತು ಸಾವಿರ ರೂ.ಗಳ ಡಿ.ಡಿ. ದೇವಸ್ಥಾನ ಸಮಿತಿಗೆ ಹಸ್ತಾಂತರ



» ಚಿತ್ರದುರ್ಗ

ನಗರದ ರಂಗಯ್ಯನಬಾಗಿಲು ಸಮೀಪವಿರುವ ಗಣಪತಿ ದೇವಸ್ಥಾನದ ಆವರಣದಲ್ಲಿ ನಿರ್ಮಾಣವಾಗುತ್ತಿರುವ ನವಗ್ರಹ ದೇವಸ್ಥಾನಕ್ಕೆ ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರಹೆಗಡೆರವರು ಮಂಜೂರು ಮಾಡಿರುವ ಐವತ್ತು ಸಾವಿರ ರೂ.ಗಳ ಡಿ.ಡಿ.ಯನ್ನು ಗುರುವಾರ ದೇವಸ್ಥಾನ ಸಮಿತಿ ಅಧ್ಯಕ್ಷ ಜಿ.ಟಿ.ಜಯಣ್ಣನವರಿಗೆ ಹಸ್ತಾಂತರಿಸಲಾಯಿತು.ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಜಿಲ್ಲಾ ನಿರ್ದೇಶಕ ದಿನೇಶ್‌ಪೂಜಾರಿ ಡಿ.ಡಿ. ಹಸ್ತಾಂತರಿಸಿ ಮಾತನಾಡುತ್ತ ಕಳೆದ ಹದಿಮೂರು ವರ್ಷಗಳಿಂದಲೂ ಚಿತ್ರದುರ್ಗದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಕಾರ್ಯನಿರ್ವಹಿಸುತ್ತಿದ್ದು, ಅನೇಕ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಡಾ.ಡಿ.ವೀರೇಂದ್ರ ಹೆಗಡೆರವರು ಹಣ ಮಂಜೂರು ಮಾಡಿದ್ದಾರೆ. ಇದರ ಜೊತೆ ಕೆರೆಗಳ ಹೂಳೆತ್ತುವುದು, ಸ್ವಸಹಾಯ ಸಂಘದ ಸದಸ್ಯರ ಮಕ್ಕಳ ಶಿಕ್ಷಣಕ್ಕಾಗಿ ವಿದ್ಯಾರ್ಥಿವೇತನ, ಶಾಲೆಗಳಿಗೆ ಡೆಸ್ಕ್ ವಿತರಣೆ ಹೀಗೆ ಹತ್ತು ಹಲವಾರು ಸಮಾಜಮುಖಿ ಕೆಲಸಗಳನ್ನು ಮಾಡಲಾಗುತ್ತಿದೆ. ನವಗ್ರಹ ದೇವಸ್ಥಾನ ನಿರ್ಮಾಣಕ್ಕೆ ನೀಡಿರುವ ಐವತ್ತು ಸಾವಿರ ರೂ. ಗಳನ್ನು ಸದುಪಯೋಗಪಡಿಸಿಕೊಂಡು ದೇವಸ್ಥಾನ ನಿರ್ಮಾಣವನ್ನು ಪೂರ್ಣಗೊಳಿಸುವಂತೆ ಮನವಿ ಮಾಡಿದರು. ಲೇಖಕ ಹೆಚ್. ಆನಂದ್‌ಕುಮಾರ್ ಮಾತನಾಡಿ ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗಡೆರವರು ದೇವಸ್ಥಾನಗಳಿಗಷ್ಟೆ ಅಲ್ಲ. ಚರ್ಚ್, ಮಸೀದಿಗಳಿಗೂ ಹಣ ನೀಡಿದ್ದಾರೆ. ಸ್ವಸಹಾಯ ಸಂಘಗಳ ಮೂಲಕ ಸ್ತ್ರೀಯರು ಸ್ವಾವಲಂಬಿಗಳಾಗಿ ಆರ್ಥಿಕವಾಗಿ ಸಬಲೀಕರಣಗೊಳ್ಳಲು ಅನೇಕ ಯೋಜನೆಗಳನ್ನು ಅನುಷ್ಠಾನಕ್ಕೆ ತಂದಿದ್ದಾರೆ. ಹಿಂದೂ ಧರ್ಮದ ಜೊತೆ ಬೌದ್ಧ ಧರ್ಮವನ್ನು ತೆಗೆದುಕೊಂಡು ಹೋಗುವ ಮೂಲಕ ಎಲ್ಲಾ ಜಾತಿ ಧರ್ಮದವರನ್ನು ಸಮಾನವಾಗಿ ಕಾಣುತ್ತಿರುವುದು ಅವರಲ್ಲಿನ ದೊಡ್ಡ ಗುಣ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



**ಚಿತ್ರದುರ್ಗ ತಾಲ್ಲೂಕಿನ ಕೂನಬೇವು ಕಾರ್ಯಕ್ಷೇತ್ರದ ಜ್ಞಾನವಿಕಾಸ ಕೇಂದ್ರದಲ್ಲಿ ಮೂರು ತಿಂಗಳು ನಡೆದ ಟೈಲರಿಂಗ್ ತರಬೇತಿ ಸಮಾರೋಪ ಸಮಾರಂಭದಲ್ಲಿ ಸರ್ಟಿಫಿಕೇಟ್‌ಗಳನ್ನು ವಿತರಿಸಿದರು.**

# ಅಗಲಿದ ರಾಜವಂಶಸ್ಥರು, ಶಾಸಕರೂ ಆದ ರಾಜಾವೆಂಕಟಪ್ಪನಾಯಕರಿಗೆ ಶ್ರದ್ಧಾಂಜಲಿ

» ಚಳ್ಳಕೆರೆ

ಕಳೆದ ಹಲವಾರು ದಶಕಗಳಿಂದ ಸಾಮಾಜಿಕ, ರಾಜಕೀಯ ಕ್ಷೇತ್ರದಲ್ಲಿ ತಮ್ಮದೇಯಾದ ವ್ಯಕ್ತಿತ್ವವನ್ನು ಗುರುತಿಸಿಕೊಂಡು ಜನಸಾಮಾನ್ಯರ ಸೇವಕರಾಗಿ ಕಾರ್ಯನಿರ್ವಹಿಸಿದೆ ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ರಾಜಾವೆಂಕಟಪ್ಪನಾಯಕ ನಿಧನಕ್ಕೆ ತಾಲ್ಲೂಕು ವಾಲ್ಮೀಕಿ ಸಮುದಾಯ ಹಾಗೂ ರಾಜವಂಶಸ್ಥರು ಶ್ರದ್ಧಾಂಜಲಿ ಸಲ್ಲಿಸಿದರು.

ಇಲ್ಲಿನ ವಾಲ್ಮೀಕಿ ಹಾಗೂ ನೆಹರೂ ವೃತ್ತದಲ್ಲಿ ದಿವಂಗತ ರಾಜಾವೆಂಕಟಪ್ಪನಾಯಕರವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು. ರುದ್ರಮುನಿ, ರಾಮರಾಜು, ದೇವಿಪ್ರಸಾದ್, ತರಕಾರಿಮಂಜಣ್ಣ, ವಕೀಲಬೋರಯ್ಯ, ಟಿ.ಜೆ.ತಿಪ್ಪೇಸ್ವಾಮಿ, ಗೊಂಚಿಗಾರಬೋರಯ್ಯ, ಪ್ರಶಾಂತ್‌ಕುಮಾರ್, ಪ್ರಸನ್ನಕುಮಾರ್, ತಿಪ್ಪೇಶ್ ಮುಂತಾದವರು ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



## ಪ್ರಮುಖ ಸುದ್ದಿ


# ವಿವಿಧ ಬೇಡಿಕೆ ಆಗ್ರಹಿಸಿ ರೈತ ಸಂಘ ಪ್ರತಿಭಟನೆ

» ಚಿತ್ರದುರ್ಗ

ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿಗೆ ಕೇಂದ್ರ ಸರ್ಕಾರ ಘೋಷಣೆ ಮಾಡಿರುವ ರೂ. 5,300 ಕೋಟಿ ಹಣವನ್ನು ಶೀಘ್ರವಾಗಿ ಬಿಡುಗಡೆ ಮಾಡಬೇಕು. ಕೇಂದ್ರ ಸರ್ಕಾರ ಬರ ಪರಿಹಾರ ಹಣವನ್ನು ಬಿಡುಗಡೆ ಮಾಡುಬೇಕು ಸೇರಿದಂತೆ ವಿವಿಧ ಬೇಡಿಕೆಯನ್ನು ಈಡೇರಿಸುವಂತೆ ಆಗ್ರಹಿಸಿ ಇಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಕರ್ನಾಟಕ ರಾಜ್ಯ ರೈತ ಹಾಗೂ ಹಸಿರು ಸೇನೆ ಡಾ॥ ವಾಸುದೇವ ಮೇಟಿ ಬಣದಿಂದ ಪ್ರತಿಭಟನೆಯನ್ನು ನಡೆಸಲಾಯಿತು.

ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಹಾಗೂ ಪ್ರಧಾನ ಮಂತ್ರಿಗಳಿಗೆ ಮನವಿ ಸಲ್ಲಿಸಿ ಎಲ್ಲಾ ರೈತರ ಸಂಪೂರ್ಣ ಸಾಲಮನ್ನವನ್ನು ಕೇಂದ್ರ ಸರ್ಕಾರ ರಾಜ್ಯ ಸರ್ಕಾರಗಳು ಮಾಡಬೇಕು. ಸಾಗುವಳಿ ಮಾಡಿರುವ ಗೋಮಾಳ ಅರಣ್ಯ ಭೂಮಿ ಬಗಾರ್ ಹುಕುಂ ಸೇಂದಿವನ ಹುಲ್ಲುಬನ್ನಿ ಖರಾಬು ಸಾಗುವಳಿದಾರರಿಗೆ ಶೀಘ್ರವಾಗಿ ಹಕ್ಕು ಪತ್ರವನ್ನು ನೀಡಬೇಕು. ಬೆಳೆವಿಮೆ ಕಟ್ಟಿದಂತೆ ಬೆಳೆಗಳು ಕಡಲೆ, ಈರುಳ್ಳಿ, ಮೆಕ್ಕೆಜೋಳ ಶೇಂಗಾ ಇತ್ಯಾದಿ





ಬೆಳೆಗಳಿಗೆ ಬೆಳೆವಿಮೆ ಹಣವನ್ನು ಶೀಘ್ರವಾಗಿ ಬಿಡುಗಡೆ ಮಾಡಬೇಕು. ಈರುಳ್ಳಿ ಕ್ವಿಂಟಾಲ್‌ಗೆ ರೂ. 4,000ರೂ ಗಳನ್ನು ನಿಗಧಿ ಮಾಡಬೇಕು, ಮೆಕ್ಕೆಜೋಳ 1 ಕ್ವಿಂಟಾಲ್‌ಗೆ ರೂ. 3000 ರೂ ಬೆಲೆಯನ್ನು ನಿಗಧಿಪಡಿಸಬೇಕು ಟಮೋಟಾಗೆ 1 ಬಾಕ್ಸ್ ರೂ. 1000 ನಿಗಧಿ ಮಾಡಬೇಕು. ಸಾಗುವಳಿ ಮಾಡಿರುವಂತ ರೈತರ ಪೋಡಿ ದುರಸ್ತಿ ಮಾಡಿಕೊಡಬೇಕು. ಡಾಕ್ಟರ್ ಸ್ವಾಮಿನಾಥನ್ ವರದಿ ಜಾರಿ ಮಾಡಬೇಕು, ರೈತರ ಬೆಳೆಗೆ ಕಾನೂನಾತ್ಮಕ ದರ ನಿಗದಿ ಮಾಡಬೇಕು.ಸರ್ಕಾರ ಬರಪೀಡಿತ ಎಂದು ಘೋಷಣೆ ಮಾಡಿದ್ದರು. ಖಾಸಗಿ ಬ್ಯಾಂಕ್ ಮತ್ತು ರಾಷ್ಟ್ರೀಕೃತ ಬ್ಯಾಂಕಿನವರು ನೋಟಿಸ್‌ಕೊಟ್ಟು ಟ್ರ್ಯಾಕ್ಟರ್, ಆಟೋ, ಅಪ್ಪೇ ಆಟೋ, ಹಾಗೂ ರೈತರು ಉಪಯೋಗಿಸುವಂತ ಅನೇಕ ರೀತಿಯ ವಾಹನಗಳನ್ನು ಬಲವಂತದಿಂದ ವಸೂಲಾತಿಮಾಡುವುದು.ಮುಟ್ಟುಗೋಲು ಹಾಕುವುದು ನಿಲ್ಲಿಸಬೇಕೆಂದು ಮನವಿ ಮಾಡಲಾಯಿತು.ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಹಾಗೂ ಹಸಿರು ಸೇನೆ ಡಾ॥ ವಾಸುದೇವ ಮೇಟಿ ಬಣದ ಜಿಲ್ಲಾಧ್ಯಕ್ಷ ಲಕ್ಷ್ಮೀಕಾಂತ್.ಈ.ಎನ್ ಲಿಂಗಾವರಹಟ್ಟಿ ಓಂಕಾರಪ್ಪ, ಪಟೇಲ್ ಮಲ್ಲಿಕಾರ್ಜುನ್, ನವೀನ್, ಮಾರುತಿ, ಸಿರಿಗೆರೆ, ಕೆಂಚಪ್ಪ ಮೀಸೆ, ಪ್ರಸನ್ನ.ಎಸ್, ಗುಂಡ್ಲೂರು ರಮೇಶ್‌ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಮಾರ್ಚ್ 24 ರಿಂದ ಹಿರಿಯೂರು ದುರ್ಗಮ್ಮ ದೇವತೆಯ ಜಾತ್ರೆ



» **ಹಿರಿಯೂರು**

ಹಿರಿಯೂರು ಗ್ರಾಮ ದೇವತೆ ಶ್ರೀ ದುರ್ಗಮ್ಮ ದೇವರ ಜಾತ್ರಾ ಮಹೋತ್ಸವ ವನ್ನು ಮಾರ್ಚ್ ತಿಂಗಳಲ್ಲಿ ನಡೆಸಬೇಕೆಂದು ದೇವಸ್ಥಾನ ಟ್ರಸ್ಟ್ ಪದಾಧಿಕಾರಿಗಳು ತೀರ್ಮಾನಿಸಿರುತ್ತಾರೆ. ಇದರ ಅಂಗವಾಗಿ 24ರ ಭಾನುವಾರ ಚಪ್ಪರಶಾಸ್ತ್ರ ಮದಲಿಂಗಿತ್ತಿ ಶಾಸ್ತ್ರ 25ರ ಸೋಮವಾರ ಅಮ್ಮನವರ ಮೂಲ ಕಳಸದೊಂದಿಗೆ ಗಂಗಾ ಪೂಜೆ ಜಲ್ದಿ ಉತ್ಸವ ಮತ್ತು ನಡೆ ಮುಡಿ ಮೂಲಕ ದೇವಸ್ಥಾನ ಪ್ರವೇಶ ಕಾರ್ಯಕ್ರಮಗಳು ನಡೆಯಲಿವೆ. ವಿಶೇಷ ಪುಷ್ಪ ಅಲಂಕಾರದೊಂದಿಗೆ ಅಮ್ಮನವರ ಉಯ್ಯಾಲೋತ್ಸವ ಕಾರ್ಯಕ್ರಮ ನಡೆಯಲಿದೆ. 26 ಮಂಗಳವಾರ ಅಮ್ಮನವರ ಮೂಲಮೂರ್ತಿಗೆ ಮಹಾ ರುದ್ರಾಭಿಷೇಕ ಪೂಜೆ ಇರುತ್ತದೆ. ಸುಮಂಗಲೆಯರಿಂದ ಅಮ್ಮನವರಿಗೆ ಉಡಿ ತುಂಬುವ ಹಾಗೂ ಆರತಿ ಸೇವೆ ಮಾಡುವ ಕಾರ್ಯಕ್ರಮಗಳು ನಡೆಯಲಿವೆ. 27ರಬುಧವಾರ ಆರತಿ ಬಾನ ಬೇವಿನ ಉಡುಗೆ ಓಕಳಿ ಮತ್ತು ಕಂಕಣ ವಿಸರ್ಜನೆ ಕಾರ್ಯಕ್ರಮಗಳು ನಡೆಯಲಿವೆ. ಎಲ್ಲ ಪೂಜಾ ಕಾರ್ಯಕ್ರಮಗಳು ಹುಳಿಯಾರು ಗ್ರಾಮ ದೇವತೆ ಶ್ರೀ ದುರ್ಗಾಪರಮೇಶ್ವರಿ ಅಮ್ಮನವರ ನೇತೃತ್ವದಲ್ಲಿ ನಡೆಯಲಿದೆ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀ ಹಿರಿಯೂರು ದುರ್ಗಮ್ಮದೇವರ ಜಾತ್ರಾ ಮಹೋತ್ಸವವನ್ನು ಯಶಸ್ವಿಗೊಳಿಸಬೇಕೆಂದು ದೇವಸ್ಥಾನ ಟ್ರಸ್ಟ್ ಪದಾಧಿಕಾರಿಗಳು ಮನವಿ ಮಾಡಿದ್ದಾರೆ

### ಹುಲ್ಲೂರಿನಲ್ಲಿ ದುರ್ಗಾಂಬಿಕಾದೇವಿಯ ಕಳಸ ಪ್ರತಿಷ್ಠಾಪನೆ

» **ಚಿತ್ರದುರ್ಗ**

ಹುಲ್ಲೂರಿನಲ್ಲಿ ದುರ್ಗಾಂಬಿಕಾದೇವಿಯ ಉತ್ಸವ ಮೂರ್ತಿ ಹಾಗೂ ಕಳಸ ಪ್ರತಿಷ್ಠಾಪನಾ ಮಹೋತ್ಸವ ಮಾ.2 ಮತ್ತು 3 ರಂದು ನಡೆಯಲಿದೆ. 2 ರಂದು ಸಂಜೆ ನಾಲ್ಕು ಗಂಟೆಯಿಂದ ಗಂಗಾ ಪೂಜೆ ನಂತರ ಪುಣ್ಯಾಹ, ರಕ್ಷಾ ಬಂಧನ, ಸರ್ವ ದೇವರುಗಳ ಆವಾಹನೆ, ಧ್ವಜಾರೋಹಣ ಹೋಮ ಹವನಾದಿಗಳು, ಮಹಾ ಮಂಗಳಾರತಿ ರಾತ್ರಿ 10-30 ರಿಂದ ಪ್ರಾಣ ಪ್ರತಿಷ್ಠಾಪನಾ ಪೂರ್ವಸಿದ್ಧತೆ. 3 ರಂದು ದುರ್ಗಾಂಬಿಕಾದೇವಿಯ ಉತ್ಸವ ಮೂರ್ತಿ ಹಾಗೂ ಕಳಸ ಪ್ರತಿಷ್ಠಾಪನೆ. ರತ್ನನಿಕ್ಷೇಪ, ಪೀಠಬಂಧ, ಪ್ರಾಣ ಪ್ರತಿಷ್ಠಾಪನೆ, ನೇತ್ರೋನ್ಮಿಲನ, ಬಿಂಬಿ ದರ್ಶನ, ಕದಳಿಛೇದನ, ಪ್ರತಿಷ್ಠಾ ಹೋಮಾದಿಗಳು, ಪೂರ್ಣಾಹುತಿ, ಬಲಿಹರಣ, ಅಷ್ಟದಿಗ್ಬಂಧನ, ಚಿತ್ರಾರತಿ, ಪಂಚಾಮೃತಾಭಿಷೇಕ, ಮಹಾಪೂಜೆ, ಮಹಾ ಮಂಗಳಾರತಿ ನಂತರ ಅನ್ನಸಂತರ್ಪಣೆ. ದಿವ್ಯ ಸಾನಿಧ್ಯವನ್ನು ಮಾದಾರ ಚನ್ನಯ್ಯಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯಸ್ವಾಮೀಜಿ ವಹಿಸಲಿದ್ದಾರೆ.

### ಸಹಕಾರ ಸಂಘಗಳು ಲೆಕ್ಕಪರಿಶೋಧಕರ ನೇಮಕ ಮಾಹಿತಿ ಸಲ್ಲಿಸಲು ಸೂಚನೆ

» **ಚಿತ್ರದುರ್ಗ**

ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ನಿಯಮ 29-ಬಿ(8)ರನ್ವಯ ಯಾವುದೇ ಸಹಕಾರ ಸಂಘದ ಮುಖ್ಯಕಾರ್ಯನಿರ್ವಾಹಕರು ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 ನಿಯಮ 8-ಬಿ(8) ರನ್ವಯ ಯಾವುದೇ ಸೌಹಾರ್ದ ಸಹಕಾರಿಯ ಮುಖ್ಯ ಕಾರ್ಯನಿರ್ವಾಹಕರು ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕಪರಿಶೋಧಕರ ಅಥವಾ ಲೆಕ್ಕಪರಿಶೋಧನಾ ಫರ್ಮ್‌ನ್ನು ನೇಮಕ ಮಾಡಿಕೊಂಡ ಬಗ್ಗೆ ವಾರ್ಷಿಕ ಮಹಾಸಭೆಯ ದಿನಾಂಕದಿಂದ 7 ದಿನಗಳೊಳಗಾಗಿ ಲೆಕ್ಕಪರಿಶೋಧಕರಿಗೆ, ಲೆಕ್ಕಪರಿಶೋಧನಾ ಫರ್ಮಿಗೆ ಮತ್ತು ಸಹಕಾರಿ ಲೆಕ್ಕಪರಿಶೋಧನಾ ನಿರ್ದೇಶಕರಿಗೆ ತಿಳಿಸಬೇಕಾಗಿರುತ್ತದೆ. ಆದರೆ ಜಿಲ್ಲೆಯ ಬಹುಪಾಲು ಸಹಕಾರ ಸಂಘಗಳು ಮತ್ತು ಸೌಹಾರ್ದ ಸಹಕಾರಿಗಳು ಲೆಕ್ಕಪರಿಶೋಧಕರ, ಲೆಕ್ಕಪರಿಶೋಧನಾ ಫರ್ಮ್‌ನ ನೇಮಕಾತಿಯ ಬಗ್ಗೆ ಕಛೇರಿಗೆ ಮಾಹಿತಿ ಸಲ್ಲಿಸಿರುವುದಿಲ್ಲ. ಮಾಹಿತಿ ಸಲ್ಲಿಸಿರುವ ಸುಮಾರು ಆಯ್ಕೆ ಪತ್ರಗಳಲ್ಲಿ ದಿನಾಂಕ ಮತ್ತು ಲೆಕ್ಕಪರಿಶೋಧಕರ, ಸನ್ನದು ಲೆಕ್ಕಪರಿಶೋಧಕರ ಹೆಸರುಗಳು ತಿದ್ದುಪಡಿಯಾಗಿರುತ್ತವೆ.

**5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ತಪ್ಪದೇ ಪೋಲಿಯೊ ಲಸಿಕೆ ಹಾಕಿಸಿ: ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಅಭಿನವ್**

# ಮಾ.3 ರಿಂದ ಪಲ್ಸ್ ಪೋಲಿಯೋ ಕಾರ್ಯಕ್ರಮ

» **ಚಿತ್ರದುರ್ಗ**

ಜಿಲ್ಲೆಯಾದ್ಯಂತ ಮಾರ್ಚ್ 3 ರಿಂದ 6 ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ನಡೆಯಲಿದ್ದು, 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ತಪ್ಪದೇ ಪೋಲಿಯೋ ಲಸಿಕೆ ಹಾಕಿಸಿ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್ ಹೇಳಿದರು.

ನಗರದ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಚಿತ್ರದುರ್ಗ ನಗರದ ನಗರ ಆರೋಗ್ಯ ಕೇಂದ್ರಗಳ ಎಲ್ಲಾ ಮೇಲ್ವಿಚಾರಣಾ ತಂಡಗಳ ಮೇಲ್ವಿಚಾರಕರಿಗೆ ಪುನರ್-ಮನನ ತರಬೇತಿ ಕಾರ್ಯಾಗಾರ ಉದ್ದೇಶಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮಕ್ಕೆ ಜಿಲ್ಲೆಯಲ್ಲಿ ಒಟ್ಟು 1213 ತಂಡಗಳನ್ನು ರಚಿಸಿಕೊಂಡು ಕಳೆದ ಬಾರಿ ನಡೆಸಿದ ಲಸಿಕಾ ಕೇಂದ್ರಗಳಲ್ಲಿ ಈ ಬಾರಿಯೂ ಸಹ ಎರಡು ಹನಿಗಳ ಪೋಲಿಯೋ ಲಸಿಕೆ ಹಾಕಲಾಗುವುದು.



ಕಾರ್ಯಕ್ರಮದ ಮೇಲ್ವಿಚಾರಣೆಗಾಗಿ 259 ಮೇಲ್ವಿಚಾರಕರನ್ನು ನೇಮಿಸಿದೆ. ಜಿಲ್ಲೆಯಲ್ಲಿ 0-5 ವರ್ಷದೊಳಗಿನ ಮಕ್ಕಳಿಗೆ ಈ ಹಿಂದೆ ಎಷ್ಟೇ ಬಾರಿ ಪೋಲಿಯೋ ಹನಿ ಹಾಕಿಸಿದ್ದರೂ ಪುನಃ ಮಾರ್ಚ್ 3 ರಿಂದ 6 ರವರೆಗೆ ಪೋಲಿಯೋ ಹಾಕಿಸಲು 1,35,105 ಮಕ್ಕಳನ್ನು ಗುರುತಿಸಲಾಗಿದೆ ಎಂದರು.

ಕಾರ್ಯಕ್ರಮಕ್ಕೆ ಸಾರ್ವಜನಿಕರು, ಸರ್ಕಾರೇತರ ಸಂಘ ಸಂಸ್ಥೆಗಳು, ಧಾರ್ಮಿಕ ಮುಖಂಡರು, ಚುನಾಯಿತ ಪ್ರತಿನಿಧಿಗಳು ಹಾಗೂ ಇತರೆ ಅಧಿಕಾರಿ ವರ್ಗದವರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯೊಂದಿಗೆ ಸಹಕರಿಸಿ ಪಲ್ಸ್ ಪೋಲಿಯೋ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ಗಿರೀಶ್ ಮಾತನಾಡಿ, ನಗರ ಪ್ರದೇಶಗಳಲ್ಲಿ ಲಸಿಕೆ ನೀಡುವಾಗ ಎಲ್ಲಾ ಸೂಕ್ಷ್ಮತೆಗಳನ್ನು ತಪ್ಪದೇ ಪರಿಶೀಲಿಸಿ. ವಲಸೆ ಕಾರ್ಮಿಕರು ಅಲ್ಲಲ್ಲಿ ಬಿಡಾರಗಳನ್ನು ಹಾಕಿಕೊಂಡಿದ್ದಾರೆ, ಕಟ್ಟಡ ಕಾರ್ಮಿಕರ ಮಕ್ಕಳಿದ್ದಾರೆ. ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಹೊಂದಿಕೊಂಡಿರುವ ಪ್ರದೇಶಗಳಲ್ಲಿ ಜಾಗರೂಕರಾಗಿ ಮಕ್ಕಳನ್ನು ಗುರುತಿಸಿ ಲಸಿಕೆ ಪಡೆಯುವಂತೆ ಮಾಡಿ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ಶನಿವಾರ ಬೆಳಿಗ್ಗೆ ಶಾಲಾ ಮಕ್ಕಳಿಂದ ಪಲ್ಸ್ ಪೋಲಿಯೊ ಜಾಗೃತಿ ಜಾಥ ನಡೆಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಲಾಗಿದ್ದು, ಸಂಬಂಧಿಸಿದ ವಾರ್ಡ್, ಶಾಲೆಗಳಿಗೆ ಭೇಟಿ ನೀಡಿ ಜಾಗೃತಿ ಜಾಥಾದಲ್ಲಿ ಪಾಲ್ಗೊಳ್ಳಬೇಕು. ಈಗಾಗಲೇ ಮಾಹಿತಿ ಶಿಕ್ಷಣ ಸಂವಹನಕ್ಕೆ ಸಂಬಂಧಿಸಿದ ಪರಿಕರಗಳನ್ನು ವಿತರಿಸಲಾಗಿದೆ ಎಂದರು.ಕಾರ್ಯಕ್ರಮದಲ್ಲಿ ವ್ಯವಸ್ಥಾಪಕ ಮೊಹಮ್ಮದ್ ಅಲಿ ಹಬೀಬ್, ಆಶಾ ಬೋಧಕಿ ಗುರುಲಿಂಗಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಗಂಗಾಧರ್, ರಂಗಾ ರೆಡ್ಡಿ ಪ್ರವೀಣ್, ಗೋಪಾಲಕೃಷ್ಣ, ಗುರುಮೂರ್ತಿ, ಶ್ರೀನಿವಾಸ್ ಮಳಲಿ, ತಿಪ್ಪೇಸ್ವಾಮಿ, ಪ್ರಸನ್ನ ಸೇರಿದಂತೆ ಇತರರು ಭಾಗವಹಿಸಿದ್ದರು.

# ಚಳ್ಳಕೆರೆ: ರಾಷ್ಟ್ರೀಯ ಪಲ್ಸ್‌ಪೋಲಿಯೋ ಕಾರ್ಯಕ್ರಮ ಮಾರ್ಚ್ 3ರಿಂದ ಆರಂಭ

» **ಚಳ್ಳಕೆರೆ**

ಪ್ರಸ್ತುತ 2024ರ ಮೊದಲ ಪಲ್ಸ್ ಪೋಲಿಯೋ ಮಾರ್ಚ್ 3ರಿಂದ ಆರಂಭವಾಗಲಿದ್ದು, ಪಲ್ಸ್ ಪೋಲಿಯೋವನ್ನುಯಶಸ್ವಿಗೊಳಿಸಲುಆರೋಗ್ಯ ಇಲಾಖೆ ಅಧಿಕಾರಿಗಳೊಂದಿಗೆ ಎಲ್ಲಾ ಇಲಾಖೆ ಮುಖ್ಯಸ್ಥರು ಹಾಗೂ ಸಾರ್ವಜನಿಕರು ಸಹಕಾರ ನೀಡುವಂತೆ ತಹಶೀಲ್ದಾರ್ ರೇಹಾನ್‌ಪಾಷ ಮನವಿ ಮಾಡಿದರು.

ಅವರು, ಗುರುವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಪಲ್ಸ್‌ಪೋಲಿಯೋ ಕಾರ್ಯಕ್ರಮದ ಬಗ್ಗೆ ಮಾಹಿತಿ ನೀಡಿ ಮಾತನಾಡಿದರು. ಪ್ರತಿವರ್ಷವೂ ಪಲ್ಸ್ ಪೋಲಿಯೋ ಯಶಸ್ವಿಗೊಳಿಸುವಲ್ಲಿ ಎಲ್ಲಾ ಇಲಾಖೆಗಳು ಆರೋಗ್ಯ ಇಲಾಖೆಗೆ ನಿರೀಕ್ಷೆಗೂ ಮೀರಿ ಸಹಕಾರ ನೀಡಿವೆ. ನಿಮ್ಮೆಲ್ಲರ ಸಹಕಾರದಿಂದ 2021-22ರಲ್ಲಿ ಪಲ್ಸ್ ಪೋಲಿಯೋ ಯಶಸ್ವಿಯಾಗಲು ಎಲ್ಲರೂ ಕಾರಣಕರ್ತರಾಗಿದ್ದೀರ. ಈ ಬಾರಿಯೂ ಸಹ ಇದರ ಯಶಸ್ಸು ಎಲ್ಲರಿಗೂ ಸಲ್ಲಲಿ ಎಂಬ ಉದ್ದೇಶದಿಂದ ನಿಮ್ಮಲ್ಲಿ ಮನವಿ ಮಾಡುತ್ತಿದ್ದೇನೆಂದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್.ಕಾಶಿ ಮಾಹಿತಿ ನೀಡಿ, ರಾಷ್ಟ್ರೀಯ ಪಲ್ಸ್‌ಪೋಲಿಯೋ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ಇಂದು ಪಲ್ಸ್ ಪೋಲಿಯೋ ಕಾರ್ಯಕ್ರಮದ ಬಗ್ಗೆ ಸಭೆ ಕರೆಯಲಾಗಿದೆ. ಸಾರ್ವಜನಿಕರು, ಸಂಘ ಸಂಸ್ಥೆ ಪ್ರತಿನಿಧಿ, ಆರೋಗ್ಯ ಇಲಾಖೆ ಸಿಬ್ಬಂದಿ ವರ್ಗ ಹಾಗೂ ಶಾಲಾ ವಿದ್ಯಾರ್ಥಿಗಳಿಂದ ಪಲ್ಸ್ ಪೋಲಿಯೋ ಜಾಗೃತಿಯನ್ನು ಹಂತ, ಹಂತವಾಗಿ ಹಮ್ಮಿಕೊಳ್ಳಲಾಗುವುದು. ಜಾಥದಲ್ಲಿ ಶಾಲಾ ವಿದ್ಯಾರ್ಥಿಗಳೊಂದಿಗೆ ಸಿಬ್ಬಂದಿ ವರ್ಗವೂ ಕೈಜೋಡಿಸುವಂತೆ ಮನವಿ ಮಾಡಿದರು.



ತಾಲ್ಲೂಕಿನಾದ್ಯಂತ ಒಟ್ಟು 401677 ಜನಸಂಖ್ಯೆ ಇದ್ದು, ಚಳ್ಳಕೆರೆ ನಗರದ ಜನಸಂಖ್ಯೆ57358, ಗ್ರಾಮೀಣ ಭಾಗದ ಜನಸಂಖ್ಯೆ344139, 0-5 ವರ್ಷಗಳ ಮಕ್ಕಳ ಸಂಖ್ಯೆ ಒಟ್ಟು 28826, ಆಪೈಕಿ ಗ್ರಾಮೀಣ 25428, ನಗರ 3398. ತಾಲ್ಲೂಕಿನಾದ್ಯಂತ ಒಟ್ಟು ಮನೆಗಳ ಸಂಖ್ಯೆ 84650, ಪಲ್ಸ್ ಪೋಲಿಯೋ ಒಟ್ಟು ಬೂತ್-233, ಒಟ್ಟು ಕಾರ್ಯನಿರ್ವಹಿಸುವ ತಂಡ 470, ಮೇಲ್ವಿಚಾರಕರು-51, ಪಲ್ಸ್ ಪೋಲಿಯೋ ಯಶಸ್ವಿಗೆ ಕಾರ್ಯನಿರ್ವಹಿಸುವರು ಎಂದರು.

ಈ ಸಂದರ್ಭದಲ್ಲಿ ಸಿಡಿಪಿಒ ಹರಿಪ್ರಸಾದ್, ಬೆಸ್ಕಾಂ ಎಇಇ ರಾಜು, ರೋಟರಿಕ್ಲಬ್ ಅಧ್ಯಕ್ಷ ಕೆ.ನಾಗೇಶ್, ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ್, ಡಾ.ಗೀತಾ, ಡಾ.ಸಂದೀಪ್, ಡಾ.ಮಂಜುನಾಥ, ಪ್ರದೀಪ್, ಶರತ್, ಆರೋಗ್ಯ ಶಿಕ್ಷಣ ಅಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ, ನಗರಸಭೆ ಆರೋಗ್ಯ ನಿರೀಕ್ಷ ಗಣೇಶ್ ಮುಂತಾದವರು ಉಪಸ್ಥಿತರಿದ್ದರು.

## ಆಗ್ನೇಯ ಶಿಕ್ಷಕ ನಿಯೋಜಿತ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ ಪರ ಮತಯಾಚನೆ



» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ಆಗ್ನೇಯ ಶಿಕ್ಷಕರ ಕ್ಷೇತ್ರದ ಶಿಕ್ಷಕರ ಸಮಸ್ಯೆಗಳ ಬಗ್ಗೆ ನಿರಂತರ ಹೋರಾಟ ನಡೆಸಿ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿದ, ಪ್ರಸ್ತುತ ಈ ಕ್ಷೇತ್ರದ ವಿಧಾನಪರಿಷತ್ ಸದಸ್ಯ ವೈ.ಎ.ನಾರಾಯಣಸ್ವಾಮಿಯವರಿಗೆ ಮತ್ತೊಮ್ಮೆ ಗೆಲುವು ತಂದುಕೊಡುವ ನಿಟ್ಟಿನಲ್ಲಿ ಎಲ್ಲಾ ಶಿಕ್ಷಕರು ಕಾರ್ಯನಿರ್ವಹಿಸಿ ಸಹಕರಿಸಬೇಕೆಂದು ರಾಜ್ಯ ಪರಿಕ್ಷಾಂಗ ಇಲಾಖೆಯ ನಿವೃತ್ತ ಜಂಟಿನಿರ್ದೇಶಕ ಎಂ.ರೇವಣಸಿದ್ದಪ್ಪ ತಿಳಿಸಿದರು.

ಅವರು, ಬುಧವಾರ ನಗರದ ಎಚ್‌ಟಿಟಿ ಸರ್ಕಾರಿ ಬಾಲಕಿಯ ಪ್ರೌಢಶಾಲೆಗೆ ಭೇಟಿ ನೀಡಿ ನಿಯೋಜಿತ ವೈ.ಎ.ನಾರಾಯಣಸ್ವಾಮಿ ಪರ ಮತಯಾಚನೆ ಮಾಡಿದರು. ವೈ.ಎ.ನಾರಾಯಣಸ್ವಾಮಿ ಶಿಕ್ಷಣ ಕ್ಷೇತ್ರದ ಅನೇಕ ವಿಚಾರಗಳ ಬಗ್ಗೆ ಹೆಚ್ಚು ಜಾಗೃತಿಯನ್ನು ಹೊಂದಿದ್ದಾರೆ. ಅವರ ಕಾರ್ಯವೈಖರಿಯಿಂದಲೇ ಅವರು ಈ ಕ್ಷೇತ್ರದಿಂದ ಮೇಲಿಂದ ಮೇಲೆ ಪುನರ್‌ಆಯ್ಕೆ ಯಾಗುತ್ತಿದ್ದಾರೆ. ಈ ವರ್ಷದ ಜೂನ್ ತಿಂಗಳಲ್ಲಿ ನಡೆಯುವ ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆ ಅವರು ಸ್ಪರ್ಧಿಸಲಿದ್ದು, ಅವರನ್ನು ಹೆಚ್ಚಿನ ಮತಗಳಿಂದ ಆಯ್ಕೆ ಮಾಡಿ ಕಳಿಸುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ನಿವೃತ್ತ ಬಿಇಒ ರಾಮಯ್ಯ, ಕೆ.ರಾಮಚಂದ್ರಪ್ಪ, ನಿವೃತ್ತ ಶಿಕ್ಷಕರಾದ ಅಶೋಕ್‌ರೆಡ್ಡಿ, ಎಂ.ಎಂ.ಮಲ್ಲಿಕಾರ್ಜುನ್, ಮಂಜುನಾಥರೆಡ್ಡಿ ಮುಂತಾದವರು ಉಪಸ್ಥಿತರಿದ್ದರು.

## ಮಾ.02ರಂದು ಸೂಕ್ಷ್ಮ ಮತ್ತು ತುಂತುರ ನಿರ್ವಹಣೆ ಕುರಿತು ತರಬೇತಿ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಮಾರ್ಚ್ 02ರಂದು ಬೆಳಿಗ್ಗೆ 10.30ಕ್ಕೆ ಹೊಳಲ್ಕೆರೆ ತಾಲ್ಲೂಕಿನ ರೈತರಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ಮತ್ತು ತುಂತುರ ನೀರಾವರಿ ಘಟಕಗಳ ಅಳವಡಿಕೆ, ಅವುಗಳ ಉಪಯೋಗ ಮತ್ತು ನಿರ್ವಹಣೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಎರಡು ತಂಡಗಳಲ್ಲಿ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಬೆಂಗಳೂರು ಜೈನ್ ಇರೀಗೇಷನ್‌ನ ಬೇಸಾಯ ತಜ್ಞ ಕೆ.ದೇವರಾಜು ಅವರು, ನೀರಿನ ಸಮರ್ಥ ಬಳಕೆ, ಹನಿ ನೀರಾವರಿ ಮತ್ತು ಸ್ಪ್ರಿಂಕ್ಲರ್ ಘಟಕಗಳ ಅಳವಡಿಕೆ, ಉಪಯೋಗ ಮತ್ತು ಅವುಗಳ ನಿರ್ವಹಣೆಯ ಕುರಿತು ವಿಷಯ ಮಂಡನೆ ಮತ್ತು ಪ್ರಾತ್ಯಕ್ಷಿಕೆ ಮಾಡಲಿದ್ದಾರೆ. ನಂತರ ತರಬೇತಿಗೆ ಹಾಜರಾದ ರೈತರನ್ನು ಬಬ್ಬೂರಿನ ಜವಳಿ ಫಾರಂನ ಸಮಗ್ರ ಕೃಷಿ ಪದ್ಧತಿ ತಾಕನ್ನು ವೀಕ್ಷಣೆಗೆ ಕರೆದುಕೊಂಡು ಹೋಗಲಾಗುವುದು. ಆದ ಪ್ರಯುಕ್ತ ಹೊಳಲ್ಕೆರೆ ತಾಲ್ಲೂಕಿನ 100 ಜನ ಆಸಕ್ತ ರೈತ ಭಾಂದವರು ತರಬೇತಿಯಲ್ಲಿ ಭಾಗವಹಿಸಲು ರಜನೀಕಾಂತ. ಆರ್, ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಬಬ್ಬೂರು ಫಾರಂ (8277931058), ಟಿ.ಪಿ.ರಂಜಿತಾ, ಕೃಷಿ ಅಧಿಕಾರಿ (8277930959), ಸಿಕಂದರ್ ಬಾಷಾ, ಕೃಷಿ ಅಧಿಕಾರಿ (8277931058) ಮತ್ತು ಪವಿತ್ರಾ ಎಂ. ಜೆ. (9535412286) ಅವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ಈ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಮೊದಲು ನೋಂದಾವಣಿ ಮಾಡಿಕೊಂಡ 100 ಜನ ರೈತರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾರ್ಚ್ 1ರಂದು ಶಾಲಾ ಕೊಠಡಿಗಳ ಉದ್ಘಾಟನೆ, ಶಾಲಾ ಶತಮಾನೋತ್ಸವ ಕಾರ್ಯಕ್ರಮ

**ಚಿತ್ರದುರ್ಗ:** ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಚಿತ್ರದುರ್ಗ ತಾಲ್ಲೂಕು ಹುಲ್ಲೇಹಾಳ್ ಬಸ್ತಿಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಾರ್ಚ್ 1ರಂದು ಬೆಳಿಗ್ಗೆ 11ಕ್ಕೆ 2023-24ನೇ ಸಾಲಿನ ಡಿ.ಎಂ.ಎಫ್ ಹಾಗೂ ಶಾಸಕರ ಅನುದಾನದಲ್ಲಿ ನಿರ್ಮಾಣ ಮಾಡಲಾದ ಶಾಲಾ ಕೊಠಡಿಗಳ ಉದ್ಘಾಟನೆ ಹಾಗೂ ಶಾಲಾ ಶತಮಾನೋತ್ಸವ ಮತ್ತು ವಾರ್ಷಿಕೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಿರಿಗೆರೆ ತರಳಬಾಳು ಬೃಹನ್ಮಠದ ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು ಕೊಠಡಿಗಳ ಉದ್ಘಾಟನೆ ನೆರವೇರಿಸುವರು.

**ಪ್ರಮುಖ ಸುದ್ದಿ**

# ಸರ್ಕಾರಿ ಶಾಲೆಯಲ್ಲಿ ನಿರ್ಮಾಣವಾಗುತ್ತಿರುವ ಶೌಚಾಲಯ ಕಟ್ಟಡ ಕಳಪೆ ಕಾಮಗಾರಿ: ಕರವೇ ಆರೋಪ

» **ಚಳ್ಳಕೆರೆ**

ಮದಕರಿ ನಗರದ 27ನೇ ವಾರ್ಡ್ ವ್ಯಾಪ್ತಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸುಮಾರು 3 ಲಕ್ಷ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಶೌಚಾಲಯ ಕಟ್ಟಡ ಕಳಪೆ ಕಾಮಗಾರಿ ಮಾಡಲಾಗುತ್ತಿದೆಎಂದುಕರ್ನಾಟಕರಕ್ಷಣ ವೇದಿಕೆ(ಪ್ರವೀಣ್‌ಕುಮಾರ್‌ಶೆಟ್ಟಿಬಣ) ಆರೋಪಿಸಿ ಗುರುವಾರ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಾಲ್ಲೂಕು ಅಧ್ಯಕ್ಷ ಪಿ.ಮಂಜುನಾಥ, ಅತಿ ಹೆಚ್ಚು ಬಡವಿದ್ಯಾರ್ಥಿಗಳು ಅಭ್ಯಾಸ ಮಾಡುವ ಈ ಶಾಲೆಯಲ್ಲಿ ಮೂಲ ಸೌಲಭ್ಯಗಳು ಅಗತ್ಯವಾಗಿ ಬೇಕಿದೆ. ಶಾಲಾ ಆವರಣದಲ್ಲಿ ಲ್ಯಾಂಡ್ ಆರ್ಮಿ ಇಲಾಖೆಯಿಂದ ನಿರ್ಮಾಣವಾಗುತ್ತಿರುವ ಶೌಚಾಲಯದ ಕಟ್ಟಡ ಸಂಪೂರ್ಣ ಕಳಪೆಯಿಂದ ಕೂಡಿದೆ. ಸಂಬಂಧಪಟ್ಟ ಗುತ್ತಿಗೆದಾರರು, ಅಧಿಕಾರಿಗಳು ಬುನಾದಿಯಿಂದಲ್ಲೂ ಯಾವುದೇ ಗುಣಮಟ್ಟ ಕಾಯ್ದುಕೊಳ್ಳದೆ ಕಟ್ಟಡ ನಿರ್ಮಿಸುತ್ತಿದ್ದಾರೆ. ಈ ಬಗ್ಗೆ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ. ಕನ್ನಡ ಸರ್ಕಾರಿ ಶಾಲೆ ಎಂದರೆ ಅಧಿಕಾರಿಗಳೂ ಸಹ ಕಡಗಣಿಸಿ ಕಳಪೆ ಕಾಮಗಾರಿಗೆ ಮುಂದಾಗಿದ್ದಾರೆ.



ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಒಂದೇ ಕಡೆಯಲ್ಲಿ ಶೌಚಾಲಯಕ್ಕೆ ಓಡಾಡಲು ಬಾಗಿಲು ತೆರೆಯಲಾಗಿದೆ, ಅದರಲ್ಲೂ ಶೌಚ ಕಟ್ಟಡ ಚಿಕ್ಕದಾಗಿ ನಿರ್ಮಿಸಿ, ಗುಣಮಟ್ಟ ಕಾಯ್ದುಕೊಳ್ಳುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ.

ಸಂಬಂಧಪಟ್ಟ ಅಧಿಕಾರಿಗಳಿಗೆ ನಮ್ಮ ಸಂಘಟನೆಯಿಂದ ಕಳಪೆ ಕಾಮಗಾರಿಯ ಬಗ್ಗೆ ಮಾಹಿತಿ ನೀಡಿ ಎರಡು ವಾರ ಕಳೆದರೂ ಯಾರೊಬ್ಬರೂ ಬಂದು ಗಮನಹರಿಸಿಲ್ಲ.

ಕಾಮಗಾರಿ ಹೀಗೆ ಮುಂದುವರೆದರೆ ಮುಂದಿನ ದಿನಗಳಲ್ಲಿ ಬೀದಿಗಿಳಿದು ಉಗ್ರ ಹೋರಾಟ ಮಾಡುವ ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ರಘುನಂದನ, ಮಹೇಂದ್ರ, ವೀರೇಶ್, ಅಭಿಷೇಕ, ಪ್ರಕಾಶ್ ಮುಂತಾದರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಬಿಜೆಪಿ ರಾಜ್ಯ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಡಾ.ನವೀನ್ ದುರ್ಗಕ್ಕೆ ಭೇಟಿ



» ಚಿತ್ರದುರ್ಗ

ಭಾರತೀಯ ಜನತಾಪಾರ್ಟಿ ಕರ್ನಾಟಕ ರಾಜ್ಯ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಡಾ.ನವೀನ್, ಕಾರ್ಯದರ್ಶಿ ಶಶಿರವರು ಚಿತ್ರದುರ್ಗಕ್ಕೆ ಆಗಮಿಸಿದಾಗ ಜಿಲ್ಲಾ ಬಿಜೆಪಿ. ರೈತ ಮೋರ್ಚಾ ಅಧ್ಯಕ್ಷ ವೆಂಕಟೇಶ್ ಯಾದವ್ ಅಭಿನಂದಿಸಿ ಜಿಲ್ಲೆಯ ರೈತರ ಸಮಸ್ಯೆಗಳ ಕುರಿತು ಮನವರಿಕೆ ಮಾಡಿದರು. ಮಧ್ಯ ಕರ್ನಾಟಕದ ಬಯಲುಸೀಮೆ ಚಿತ್ರದುರ್ಗ ಜಿಲ್ಲೆಗೆ ಭದ್ರಾಮೇಲ್ದಂಡೆ ಯೋಜನೆಯೊಂದೆ ಶಾಶ್ವತ ಪರಿಹಾರ. ಮಳೆಯಿಲ್ಲದೆ ಎಲ್ಲಾ ಬೆಳೆಗಳು ಒಣಗಿ ರೈತರು ಸಂಕಷ್ಟದಲ್ಲಿದ್ದಾರೆ. ರಾಜ್ಯ ಸರ್ಕಾರ ಪರಿಹಾರ ನೀಡುತ್ತಿಲ್ಲ. ಸರ್ವೆ ಇಲಾಖೆಯಲ್ಲಿ ರೈತರ ಶೋಷಣೆಯಾಗುತ್ತಿದೆ. ರೈತರ ಪಂಪ್‌ಸೆಟ್‌ಗಳಿಗೆ ವೋಲ್ಟೇಜ್ ಕೊರತೆಯಿದ. ಬೀಜ ಮತ್ತು ರಸಗೊಬ್ಬರಗಳು ಸಮಯಕ್ಕೆ ಸರಿಯಾಗಿ ರೈತರಿಗೆ ಸಿಗುತ್ತಿಲ್ಲ. ಈ ಸಂಬಂಧ ರಾಜ್ಯ ಸರ್ಕಾರದ ಗಮನ ಸೆಳೆದು ಅನ್ನದಾತ ರೈತರಿಗೆ ನೆರವಾಗಬೇಕೆಂದು ಮನವಿ ಮಾಡಿದರು. ಬುರುಡೆಕಟ್ಟೆ ರಾಜೇಶ್, ಜಿಲ್ಲಾ ಮಾಧ್ಯಮ ವಕ್ತಾರ ನಾಗರಾಜ್‌ಬೇದ್ರೆ, ಆದರ್ಶ್ ಈ ಸಂದರ್ಭದಲ್ಲಿ ಹಾಜರಿದ್ದರು.

### 8ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ

» ದಾವಣಗೆರೆ

ಮುಂಬರುವ 2024-25 ಸಾಲಿಗೆ ಪರಿಶಿಷ್ಟ ಜಾತಿ ಹಾಗೂ ಅನೈರ್ಮಲ್ಯಕರ ವೃತ್ತಿಯಲ್ಲಿ ತೊಡಗಿರುವ ಪೋಷಕರ ಪ್ರತಿಭಾವಂತ ಗಂಡು ಮಕ್ಕಳಿಗೆ ಪ್ರತಿಷ್ಠಿತ ಮೈಸೂರಿನ ಶ್ರೀರಾಮಕೃಷ್ಣ ವಿದ್ಯಾಶಾಲೆಯಲ್ಲಿ 8 ನೇ ತರಗತಿಗೆ ಪ್ರವೇಶ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ. ಏಪ್ರಿಲ್ 11 ರಂದು ಬೆಳಿಗ್ಗೆ 10 ಗಂಟೆಗೆ ಶ್ರೀ. ರಾಮಕೃಷ್ಣ ವಿದ್ಯಾಶಾಲೆ, ಯಾದವಗಿರಿ, ಮೈಸೂರು ಇಲ್ಲಿ ಆಯ್ಕೆ ಪ್ರವೇಶ ಪರೀಕ್ಷೆ ಇರುತ್ತದೆ. ಇದಕ್ಕೆ ಸಂಬಂಧಿಸಿದ ಅರ್ಜಿಯನ್ನು ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ 37, ಮೊದಲನೇ ಮಹಡಿ, ಜಿಲ್ಲಾಡಳಿತ ಭವನ, ದಾವಣಗೆರೆ ಇಲ್ಲಿ ಪಡೆಯಬಹುದು. ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಮಾ.22 ರೊಳಗೆ ಕಚೇರಿಗೆ ಸಲ್ಲಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಎಲೆಬೇತೂರು ಶಾಖಾ ವ್ಯಾಪ್ತಿಯ ದಾವಣಗೆರೆ 66/11 ಕೆ.ವಿ ವ್ಯಾಪ್ತಿಯಲ್ಲಿ ಎ.ಬಿ ಕೇಬಲ್ ಕಾಮಗಾರಿ ಇರುವುದರಿಂದ ಮಾರ್ಚ್ 1 ರಂದು ಬೆಳ್ಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಕಾಡಜ್ಜಿ, ರಾಂಪುರ , ನಾಗರಕಟ್ಟೆ, ಬಸವನಾಳು, ಬಸವನಾಳು-ಗೊಲ್ಲರಹಟ್ಟಿ, ಬೇತೂರು, ಪುಟುಗನಾಳು ಮತ್ತು ಸುತ್ತಮುತ್ತ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

### ದ್ವಿತೀಯ ಪಿಯು ಪರೀಕ್ಷೆಗಳು ಇಂದಿನಿಂದ ಆರಂಭ, 2800ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಣದಲ್ಲಿ

» ಚಳ್ಳಕೆರೆ

ರಾಜ್ಯ ಪಿಯು ಮಂಡಳಿ ನಿರ್ದೇಶನದಂತೆ ಪಿಯುಸಿ ಪರೀಕ್ಷೆಗಳು ಮಾರ್ಚ್ 1ರಿಂದ22ರ ತನಕ ನಡೆಯಲಿವೆ ಎಂದು ನಗರದ ಸರ್ಕಾರಿ ಪದವಿಪೂರ್ವಕಾಲೇಜಿನ ಪ್ರಾಂಶುಪಾಲ ಎಂ.ರವೀಶ್ ತಿಳಿಸಿದರು. ಅವರು, ಈ ಬಗ್ಗೆ ಮಾಹಿತಿ ನೀಡಿ, ರಾಜ್ಯ ಪಿಯು ಮಂಡಳಿ ನಿರ್ದೇಶನದಂತೆ ದ್ವಿತೀಯ ಪಿಯು ಪರೀಕ್ಷೆಗಳು ಆರಂಭವಾಗಲಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಪರೀಕ್ಷೆ ಯಶಸ್ವಿಯಾಗಿ ನಡೆಸಲು ಎಲ್ಲಾ ಕ್ರಮ ಕೈಗೊಳ್ಳಲಾಗಿದೆ ಎಂದರು. ತಾಲ್ಲೂಕಿನಾದ್ಯಂತ ಒಟ್ಟು ಮೂರು ಪರೀಕ್ಷೆ ಕೇಂದ್ರಗಳನ್ನು ನಿಯೋಜಿಸಿದ್ದು, ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ 1545, ಬಾಪೂಜಿ ಪದವಿಪೂರ್ವ ಕಾಲೇಜಿನಲ್ಲಿ 900, ಪರಶುರಾಮಪುರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ 400 ಒಟ್ಟು 2800 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಪರೀಕ್ಷೆ ಮೇಲ್ವಿಚಾರಕರನ್ನು ನೇಮಿಸಲಾಗಿದೆ. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಪೊಲೀಸರು ಸೂಕ್ತ ಬಂದೋಬಸ್ತ್ ಕಾರ್ಯವನ್ನು ನಿರ್ವಹಿಸಲಿದ್ದಾರೆ ಎಂದರು.

# ವಿಶ್ವದ ಬದುಕು ಸಂಸ್ಕೃತಿ ತಿಳಿಯಲು ಅಂತಾರಾಷ್ಟ್ರೀಯ ಚಿತ್ರೋತ್ಸವ ನೆರವಾಗುತ್ತದೆ

## ಅಂಬೇಡ್ಕರ್ ಮೌಲ್ಯಗಳ ಕುರಿತಾದ ಸಿನಿಮಾಗಳಿಗೆ ಅಗತ್ಯವಾದ ಎಲ್ಲಾ ರೀತಿಯ ನೆರವು: ಸಿಎಂ

» ಬೆಂಗಳೂರು

ವಿಶ್ವದ ಬದುಕು ಸಂಸ್ಕೃತಿ ತಿಳಿಯಲು ಮತ್ತು ನಮ್ಮ ಸಮಾಜವನ್ನು ಇನ್ನಷ್ಟು ಮಾನವೀಯಗೊಳಿಸಲು ಅಂತಾರಾಷ್ಟ್ರೀಯ ಚಿತ್ರೋತ್ಸವ ನೆರವಾಗುತ್ತದೆ ಎಂದು ಸಿಎಂ ಸಿದ್ದರಾಮಯ್ಯ ನುಡಿದರು.

ವಿಧಾನಸೌಧದ ಗ್ರಾಂಡ್ ಸ್ಟೆಪ್ಸ್ ನಲ್ಲಿ 15 ನೇ ಬೆಂಗಳೂರು ಅಂತಾರಾಷ್ಟ್ರೀಯ ಸಿನಿಮೋತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

ಇಡಿ ಜಗತ್ತು ಮಾನವೀಯ ಬೆಸುಗೆಯಲ್ಲಿ ಬೆರೆಯಲು, ಮನುಷ್ಯ ಮನುಷ್ಯನನ್ನು ಪ್ರೀತಿಸುವ ಸಂಸ್ಕೃತಿಯನ್ನು ಪಾಲಿಸಿದಾಗ ಜಗತ್ತಲ್ಲಿ ಶಾಂತಿ ನೆಲೆಸುತ್ತದೆ. ಸಿನೆಮಾ ಬಹಳ ಪ್ರಭಾವಿ ಮಾಧ್ಯಮ. ನೋಡುಗರ ಮನಸ್ಸು, ಆಲೋಚನೆಯ ಮೇಲೆ ಪ್ರಭಾವ ಬೀರುವ ಶಕ್ತಿ ಸಿನಿಮಾಗಿದೆ. ಸಿನಿಮಾಗಳ ಮೂಲಕ ದೇಶದ ಒಳಗಿನ, ಇತರೆ ದೇಶಗಳ ಜನ ಸಂಸ್ಕೃತಿಯನ್ನು ಅರಿಯುವ ಮತ್ತು ಆ ಮೂಲಕ ನಮ್ಮ ಮಾನವೀಯ ಸಂಸ್ಕೃತಿಯನ್ನು ವಿಸ್ತರಿಸಿಕೊಳ್ಳಲು ನೆರವಾಗುತ್ತದೆ. ಇದಕ್ಕೆ ಅಂತಾರಾಷ್ಟ್ರೀಯ ಚಿತ್ರೋತ್ಸವ ವೇಗವರ್ದಕವಾಗಿ ಕೆಲಸ ಮಾಡುತ್ತದೆ ಎಂದರು.



ಅಂಬೇಡ್ಕರ್ ಅವರ ಸಂವಿಧಾನ ಇತರೆ ದೇಶಗಳ ಸಂವಿಧಾನದಲ್ಲಿ ಇಲ್ಲದ ಸಾಮಾಜಿಕ ನ್ಯಾಯದ ಮೌಲ್ಯಗಳಿವೆ. ಅಂಬೇಡ್ಕರ್ ಮತ್ತು ಇವರ ಮೌಲ್ಯಗಳ ಕುರಿತಾದ ಸಿನಿಮಾಗಳಿಗೆ ಅಗತ್ಯವಾದ ಎಲ್ಲಾ ರೀತಿಯ ನೆರವನ್ನು ನೀಡಲಾಗುವುದು ಎಂದು ಇದೇ ಸಂದರ್ಭದಲ್ಲಿ ಘೋಷಿಸಿದರು.

ಕುವೆಂಪು ಅವರ ವಿಶ್ವ ಮಾನವ ಸಂಸ್ಕೃತಿಯನ್ನು ವಿಶ್ವದಲ್ಲಿ ಹೆಚ್ಚೆಚ್ಚು ಪಾಲಿಸುವಂಥಾ ವಾತಾವರಣ ಸೃಷ್ಟಿಯಾಗಬೇಕು. ಇದಕ್ಕೆ ವಿಶ್ವ ಸಿನಿಮಾಗಳು ನೆರವಾಗುತ್ತವೆ ಎಂದರು.

**2019 ರಿಂದ ಉತ್ತಮ ಸಿನಿಮಾ ಆಯ್ಕೆಗೆ ಸಮಿತಿ ರಚಿಸಿದ್ದೇವೆ:** 2019 ರಿಂದ ಚಲನಚಿತ್ರ ಪ್ರಶಸ್ತಿಗಳನ್ನು ಕೊಟ್ಟಿಲ್ಲ. ನಾವು ಆ ಎಲ್ಲಾ ಬಾಕಿ ಉಳಿದಿರುವ ಎಲ್ಲಾ ವರ್ಷಗಳ ಉತ್ತಮ ಸಿನಿಮಾಗಳ ಆಯ್ಕೆಗೆ ಸಮಿತಿಗಳನ್ನು ರಚಿಸಲಾಗಿದೆ. ಸಮಿತಿ ವರದಿ ಕೊಟ್ಟ ತಕ್ಷಣ ಪ್ರಶಸ್ತಿಗಳನ್ನು ಘೋಷಿಸಲಾಗುವುದು ಎಂದರು. ಸಭಾಪತಿಗಳಾದ ಬಸವರಾಜ ಹೊರಟ್ಟಿ, ಶ್ರೇಷ್ಠ ನಟ ಶಿವರಾಜ್ ಕುಮಾರ್, ಅಂತಾರಾಷ್ಟ್ರೀಯ ಚಿತ್ರೋತ್ಸವದ ರಾಯಭಾರಿಯಾದ ನಟ ಡಾಲಿ ಧನಂಜಯ್, ಖ್ಯಾತ ನಿರ್ದೇಶಕ ಜಬ್ಬಾರ್ ಪಟೇಲ್, ಚೆಕ್ ರಿಪಬ್ಲಿಕ್ ದೇಶದ ಚಿತ್ರ ವಿಮರ್ಷಕರಾದ ಮೆಯೆರಾ ಲಾಂಗೆರೊವಾ, ಚಿತ್ರೋತ್ಸವದ ಕಲಾತ್ಮಕ ನಿರ್ದೇಶಕರಾದ ವಿದ್ಯಾಶಂಕರ್, ನಟಿ ಆರಾಧನಾ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಆರಾಧನಾ, ಚಲನಚಿತ್ರ ಅಕಾಡೆಮಿಯ ನಿಯೋಜಿತ ಅಧ್ಯಕ್ಷರಾದ ಸಾಧು ಕೋಕಿಲಾ, ವಾಣಿಜ್ಯ ಮಂಡಳಿ ಅಧ್ಯಕ್ಷರಾದ ಎನ್.ಎಂ.ಸುರೇಶ್ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

# ಹರಿಹರ ನಗರಸಭೆ ಬಜೆಟ್ ಮಂಡನೆ

## 58.78 ಕೋಟಿ ಆದಾಯ, 4.90 ಲಕ್ಷ ಉಳಿತಾಯ, ಅಭಿವೃದ್ಧಿ ಪೂರಕ ಬಜೆಟ್ ಮಂಡಿಸಿದ ಜಿಲ್ಲಾಧಿಕಾರಿ ಹಾಗೂ ಆಡಳಿತಾಧಿಕಾರಿ ಡಾ; ವೆಂಕಟೇಶ್ ಎಂ.ವಿ

» ದಾವಣಗೆರೆ

ಹರಿಹರ ನಗರಸಭೆಯ 2024-25 ನೇ ಸಾಲಿನ ಆಯವ್ಯಯವನ್ನು ರೂ.56,78,11,000 ರೂ.ಗಳಿಗೆ ಮಂಡಿಸಿ ರೂ.4,79,000 ಗಳ ಉಳಿತಾಯ, ಅಭಿವೃದ್ಧಿ ಪೂರಕ ಬಜೆಟ್‌ನ್ನು ಜಿಲ್ಲಾಧಿಕಾರಿ ಹಾಗೂ ನಗರಸಭೆ ಆಡಳಿತಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ಗುರುವಾರ ಮಂಡಿಸುವ ಮೂಲಕ ಅನುಮೋದನೆ ಪಡೆದರು.

2024-25 ನೇ ಸಾಲಿನಲ್ಲಿ ನಗರಸಭೆಯ ಒಟ್ಟು ಆದಾಯ ಕೇಂದ್ರ, ರಾಜ್ಯ ಸರ್ಕಾರದಿಂದ ಬರುವ ಅನುದಾನ, ನಗರಸಭೆ ಆಸ್ತಿ ತೆರಿಗೆ, ನೀರಿನ ತೆರಿಗೆ, ಬಾಡಿಗೆ, ಟ್ರೇಡ್ ಲೈಸೆನ್ಸ್ ಶುಲ್ಕ, ಜಾಹಿರಾತು ಶುಲ್ಕದ ಸೇರಿ ಎಲ್ಲಾ ಮೂಲಗಳಿಂದ ರೂ.56.78 ಕೋಟಿ ಆದಾಯ ನಿರೀಕ್ಷೆ ಮಾಡಲಾಗಿದೆ. ಈ ಸಾಲಿಗೆ ರೂ.56,73,3200 ಗಳಿಗೆ ವಿವಿಧ ಯೋಜನೆಗಳು ಹಾಗೂ ಆಡಳಿತಾತ್ಮಕ ವೆಚ್ಚಗಳಿಗೆ ಖರ್ಚು ತೋರಿಸಲಾಗಿದ್ದು 2024-25 ನೇ ಸಾಲಿಗೆ 4.90 ಲಕ್ಷ ರೂ.ಗಳ ಉಳಿತಾಯ ಬಜೆಟ್ ಮಂಡಿಸಲಾಗಿದೆ.

ಬಜೆಟ್ ಮುಖ್ಯಾಂಶಗಳು; ಅಭಿವೃದ್ಧಿ ಪೂರಕ ಬಜೆಟ್ ಇದಾಗಿದ್ದು ಈ ನಿಟ್ಟಿನಲ್ಲಿ ಅಭಿವೃದ್ಧಿಗೆ ವಿನೂತನ ಸ್ಪರ್ಶ ನೀಡಿ ಯೋಜನೆ ರೂಪಿಸಲಾಗಿದೆ. ಮತ್ತು ಹರಿಹರಕ್ಕೆ ಆಧುನಿಕ ಲೇಪನ, ಪ್ರಕೃತಿ ಸೌಂದರ್ಯಕ್ಕೆ ವಿಶೇಷ ಒತ್ತು, ಪ್ರವಾಸೋದ್ಯಮ, ಭವಿಷ್ಯದ ಯೋಜನೆಗಳಿಗೆ ಆದ್ಯತೆ ನೀಡಲಾಗಿದೆ.




ಲಕ್ಷ ವೃಕ್ಷೋತ್ಸವವನ್ನು ನಗರಸಭೆ ವ್ಯಾಪ್ತಿಯಲ್ಲಿ ಹಮ್ಮಿಕೊಳ್ಳಲು ಉದ್ದೇಶಿಸಿದ್ದು ಇದಕ್ಕಾಗಿ ನಗರದಲ್ಲಿರುವ ರಸ್ತೆ, ಬಡಾವಣೆಗಳಲ್ಲಿ ಹಾಗೂ ಪಾರ್ಕ್ ಅಭಿವೃದ್ಧಿಪಡಿಸುವ ಮೂಲಕ ಗಿಡಗಳನ್ನು ನೆಟ್ಟು ನಗರದ ಸೌಂದರ್ಯ ಹೆಚ್ಚಿಸುವುದು, ಅಂತರ್ಜಲ ಹೆಚ್ಚಳಕ್ಕೆ ಅಮೃತ ಸರೋವರ ನಿರ್ಮಾಣ ಮಾಡುವ ಮೂಲಕ ಅಂತರ್ಜಲ ಮಟ್ಟ ಕಾಯ್ದುಕೊಂಡು ಬರಗಾಲದಲ್ಲಿಯೂ ಜನರಿಗೆ ನೀರಿನ ಕೊರತೆಯಾಗದಿರಲೆಂದು ಮತ್ತು ನಗರದ ಜನರಿಗೆ ಬೇಸಿಗೆಯಲ್ಲಿ ನಿರಂತರ ಕುಡಿಯುವ ನೀರು ಒದಗಿಸಲು ರಾಜನಹಳ್ಳಿ ಸಮೀಪ ಎರಡು ಎಕರೆ ಜಮೀನಿನಲ್ಲಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಮಾಡುವ ಮೂಲಕ ಕುಡಿಯುವ ನೀರು ಸಂಗ್ರಹಕ್ಕಾಗಿ ಭವಿಷ್ಯದ ಯೋಜನೆ ರೂಪಿಸಲಾಗಿದೆ.

ನಗರದಲ್ಲಿನ 10 ಅಂಗನವಾಡಿ ಕೇಂದ್ರಗಳನ್ನು ಸ್ಮಾರ್ಟ್ ಕೇಂದ್ರಗಳನ್ನಾಗಿ ನಿರ್ಮಾಣ ಮಾಡುವ ಮೂಲಕ ಕಲಿಕೆಯಲ್ಲಿ ಆಧುನಿಕತೆಯ ಸ್ಪರ್ಶ ನೀಡಲಾಗುತ್ತದೆ. ಎಲ್ಲಾ ವಸ್ತುಗಳು ಒಂದೆಡೆ ಸಿಗುವಂತೆ ಮಾಡಲು ಅಮೃತ ಸ್ಟೋರ್ ಮತ್ತು ಇತಿಹಾಸ ಪ್ರಶಿದ್ದ ಹರಿಹರೇಶ್ವರ ದೇವಸ್ಥಾನ ಹಾಗೂ ತುಂಗಭದ್ರಾ ನದಿಯ ತೀರವನ್ನು ಅಭಿವೃದ್ಧಿಪಡಿಸುವ ಮೂಲಕ ಪ್ರವಾಸೋದ್ಯಮ ಉತ್ತೇಜಿಸಲು ಆಯವ್ಯಯದಲ್ಲಿ ಯೋಜಿಸಲಾಗಿದೆ.

ಜೊತೆಗೆ ಹರಿಹರ ಸಂಪರ್ಕ ಕೇಂದ್ರತ ಸ್ಥಳವಾಗಿದ್ದು ಶಿವಮೊಗ್ಗ, ಹೊಸಪೇಟೆ, ಕಲಬುರಗಿ, ಧಾರವಾಡ, ಬೆಂಗಳೂರು ಕಡೆಗೆ ಹೋಗುವ ಪ್ರಯಾಣಿಕರು ಮತ್ತು ಪ್ರವಾಸಿಗರ ಸಂಚಾರ ದಟ್ಟಣೆ ಹೆಚ್ಚಿರುವುದರಿಂದ ಒಂದೇ ಸೂರಿನಡಿ ತರೆಹವಾರಿ ತಿನಿಸುಗಳು ಲಭ್ಯವಾಗಬೇಕೆಂದು ಫುಡ್ ಕೋರ್ಟ್ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ.

ಬಜೆಟ್ ಮಂಡನೆಯಲ್ಲಿ ಶಾಸಕರಾದ ಬಿ.ಪಿ.ಹರೀಶ್ ಭಾಗವಹಿಸಿದ್ದರು. ಇದೊಂದು ಅಭಿವೃದ್ಧಿ ಪೂರಕ ಭವಿಷ್ಯದ ಬಜೆಟ್ ಆಗಿದ್ದು ಸಮರ್ಪಕವಾಗಿ ಅನುಷ್ಠಾನವಾಗಬೇಕೆಂದರು. ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹಂತೇಶ್, ಪೌರಾಯುಕ್ತ ಬಸವರಾಜ ಐಗೂರು ಮತ್ತು ಎಲ್ಲಾ 31 ಜನ ನಗರಸಭಾ ಸದಸ್ಯರು, 5 ಜನರು ನಾಮನಿರ್ದೇಶಿತ ಸದಸ್ಯರು ಉಪಸ್ಥಿತರಿದ್ದರು.

# ಪ್ರತಿಭಟನೆಯಲ್ಲಿ ಗಾಯಗೊಂಡಿದ್ದ ಬಾರ್ಗವಿ ಆರೋಗ್ಯ ವಿಚಾರಿಸಿದ ಮಾಜಿ ಶಾಸಕ ತಿಪ್ಪಾರೆಡ್ಡಿ



» ಚಿತ್ರದುರ್ಗ

ರಾಷ್ಟ್ರಕ್ಕೆ ವಿರೋಧವಾಗಿ ಕೂಗಿರುವ ವಿಚಾರವನ್ನು ಅಪರಾಧಿಯನ್ನು ಕಾಂಗ್ರೆಸ್ ಪಕ್ಷ ರಕ್ಷಣೆ ಮಾಡುತ್ತಿದೆ. ನಿಜವಾಗಲು ದುರ್ದೈವವಾಗಿದೆ ಎಂದು ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ತಿಳಿಸಿದರು.

ನಿನ್ನೆ ಬಿಜೆಪಿವತಿಯಿಂದ ಕಾಂಗ್ರೆಸ್ ಕಚೇರಿ ಮುಂದೆ ನಡೆದ ಪ್ರತಿಭಟನೆಯಲ್ಲಿ ಪೋಲಿಸ್ ಪೇದೇಯೂರ್ವರು ತಳ್ಳಿದ ಹಿನ್ನಲೆಯಲ್ಲಿ ಗಾಯಗೊಂಡಿದ್ದ ಬಿಜೆಪಿ ಯುವ ಘಟಕದ ರಾಜ್ಯ ಕಾರ್ಯದರ್ಶಿ ಬಾರ್ಗವಿ ದ್ರಾವಿಡೆ ರವರನ್ನು ಆಸ್ಪತ್ರೆಯಲ್ಲಿ ಭೇಟಿಯಾಗಿ ಮಾತನಾಡಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ರಾಜ್ಯ ಸಭಾ ಚುನಾವಣೆಯಲ್ಲಿ ವಿಧಾನಸೌಧದಲ್ಲಿ ದೇಶದ್ರೋಹಿಗಳು ಮಾಡುವ ಕೆಲಸವಾಗಿದೆ. ಪಾಕಿಸ್ತಾನಗೆ ಜಿಂದಾಬಾದ್ ಎಂದು ಕೂಗಿರುವುದು ಮಾಧ್ಯಮಗಳಲ್ಲಿ ಕಂಡು ಬಂದಿದೆ. ವಿಧಾನಸಭೆ ಮತ್ತು ವಿಧಾನ ಪರಿಷತ್ ನಲ್ಲಿ ಇದರ ಬಗ್ಗೆ ಪರೀಶೀಲನೆಗೆ ಕಳುಹಿಸಲಾಗಿದೆ ಎಂಬ ಉತ್ತರ ಮುಖ್ಯಮಂತ್ರಿಗಳು ಹೇಳುತ್ತಿದ್ದಾರೆ ಇದರ ವಿಷಯವಾಗಿ ಉಪ ಮುಖ್ಯಮಂತ್ರಿಗಳು ಈ ರೀತಿ ಆಗಿಲ್ಲ ಎಂದು ಹೇಳುತ್ತಿದ್ದಾರೆ.

ಸುರ್ಜೆವಾಲ ರವರು ಇದರ ಬಗ್ಗೆ ತೀರ್ಮಾನವನ್ನು ನೀಡಿ, ಇದು ಸುಳ್ಳು ರಾಜಕೀಯದಿಂದ ಪ್ರೇರಿತವಾದದು ಹೇಳಿ ಮಾಡಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ. ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿದಾಗ ಅವರ ಪಕ್ಕದಲ್ಲಿದ್ದ ವ್ಯಕ್ತಿಯೂರ್ವ ಅವರ ಬಾಯಿಯನ್ನು ಮುಚ್ಚುತ್ತಾನೆ, ರಾಷ್ಟ್ರಕ್ಕೆ ವಿರೋಧವಾಗಿ ಕೂಗಿರುವ ವಿಚಾರವನ್ನು ಅಪರಾಧಿಯನ್ನು ಕಾಂಗ್ರೆಸ್ ಪಕ್ಷ ರಕ್ಷಣೆ ಮಾಡುತ್ತಿದೆ. ನಿಜವಾಗಲು ದುರ್ದೈವವಾಗಿದೆ.

ಪಕ್ಷದ ಆದೇಶ ಮೇರೆಗೆ ಪ್ರತಿಭಟನೆಯನ್ನು ಮಾಡಲಾಗುತ್ತಿತ್ತು ದಲಿತ ಮಹಿಳೆಯ ಭಾರ್ಗವಿಯ ಮೇಲೆ ಮಹಿಳಾ ಪೋಲಿಸ್ ಪೇದೇಯಿಂದ ದೂಕಲಾಗಿದೆ.

## ಪ್ರಮುಖ ಸುದ್ದಿ

### ಯುವ ಶಿಕ್ಷಕರು ಸ್ವಾಸ್ಥ್ಯ ಸಮಾಜ ನಿರ್ಮಾಣದಲ್ಲಿ ಕೈಜೋಡಿಸಬೇಕು; ಪ್ರೊ.ಡಿ.ಬಿ.ಕುಂಬಾರ

# ತಂಬಾಕಿನಿಂದಾಗುವ ದುಷ್ಪರಿಣಾಮಗಳ ಕುರಿತು ತರಬೇತಿ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ದಾವಣಗೆರೆ ವಿಶ್ವವಿದ್ಯಾನಿಲಯ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ದಾವಣಗೆರೆ ಇವರ ಸಹಯೋಗದೊಂದಿಗೆ ಗುರುವಾರ ಎಂ.ಬಿ.ಎ ಸಭಾಂಗಣದಲ್ಲಿ ಎಂ.ಪಿ.ಇಡಿ ಪ್ರಶಿಕ್ಷಣಾರ್ಥಿಗಳಿಗೆ ತಂಬಾಕಿನಿಂದ ಆಗುವ ದುಷ್ಪರಿಣಾಮಗಳು ಹಾಗೂ ಕೋಟ್ಪಾ-2003 ರ ಕಾಯ್ದೆಯ ಕುರಿತು ತರಬೇತಿ ಕಾರ್ಯಗಾರವನ್ನು ಏರ್ಪಡಿಸಲಾಗಿತ್ತು.

ಕಾರ್ಯಗಾರವನ್ನು ದಾವಣಗೆರೆ ವಿಶ್ವವಿದ್ಯಾನಿಲಯ ಕುಲಪತಿಗಳಾದ ಪ್ರೊ. ಬಿ.ಡಿ. ಕುಂಬಾರ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು ಮುಂದಿನ ದಿನಗಳಲ್ಲಿ ಶಿಕ್ಷಕ ವೃತ್ತಿ ಆರಂಬಿಸುವ ನೀವು ತಂಬಾಕಿನ ದುಷ್ಪರಿಣಾಗಳ ಬಗ್ಗೆ ಅರಿತು ಈ ಬಗ್ಗೆ ಸಮುದಾಯಕ್ಕೆ ತಲುಪಿಸುವ ಜವಾಬ್ದಾರಿ ನಿಮ್ಮದಾಗಿರುತ್ತದೆ. ನಿಮ್ಮಿಂದ ಸಾರ್ವಜನಿಕರಲ್ಲಿ ಪ್ರಜ್ಞೆ ಉಂಟಾಗಿ ಸ್ವಾಸ್ಥ್ಯ ಸಮಾಜ ನಿರ್ಮಿಸಬಹುದು. ತಂಬಾಕು ಉತ್ಪನ್ನ ತಯಾರಿಸುವ ಕಂಪನಿಯ ಮಾಲಿಕರು ಆಕಾಶದಲ್ಲಿ ಹಾರಡುತ್ತಿದ್ದು, ತಂಬಾಕು ಉತ್ಪನ್ನಗಳನ್ನ ಬಳಸುತ್ತಿರುವವರು ರೋಗ-ರುಜಿನೆಗಳಿಂದ ಬಳಲಿ ಆರ್ಥಿಕ ತೊಂದರೆಗಳಿಂದ ಆಸ್ಪತ್ರೆಗಳಿಗೆ ಅಲೆದಾಡುತ್ತಿದ್ದಾರೆ. ಆದ್ದರಿಂದ ಪ್ರತಿ ಒಬ್ಬ ನಾಗರಿಕರು ಇಂತಹ ದುಶ್ಚಟಗಳಿಂದ ದೂರವಿದ್ದು ಸ್ವಾಸ್ಥ್ಯ ಸಮಾಜ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಯುವಶಿಕ್ಷಕರ ಜವಾಬ್ದಾರಿ ಹೆಚ್ಚಿದೆ ಎಂದು ತಿಳಿಸಿದರು.



ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ॥ಷಣ್ಮುಖಪ್ಪ.ಎಸ್ ಮಾತನಾಡಿ ಯುವಕರು ಕುತೂಹಲದಿಂದ ದುಶ್ಚಟಗಳಿಗೆ ಬಲಿಯಾಗಿ ಅತೀ ಚಿಕ್ಕ ವಯಸ್ಸಿನಲ್ಲಿಯೇ ಮರಣ ಹೊಂದುತ್ತಿರುವವರನ್ನ ರಸ್ತೆ ಬದಿಯಲ್ಲಿ ಅಂಟಿಸುವ ಪೋಸ್ಟರ್‌ಗಳಲ್ಲಿ ನೋಡುತ್ತಿದ್ದೇವೆ. ಹಾಗಾಗಿ ಉತ್ತಮ ಆರೋಗ್ಯಕ್ಕಾಗಿ ದುಶ್ಚಟಗಳಿಂದ ದೂರವಿರಿ, ತಂಬಾಕು ಬಾಯಿ ಮತ್ತು ಶ್ವಾಸಕೋಶದ ಕ್ಯಾನ್ಸರ್‌ಗೆ ಸಿಮೀತವಾಗದೆ, ದೇಹದ ಪ್ರತಿ ಒಂದು ಅಂಗಾಂಗಕ್ಕೂ ಕ್ಯಾನ್ಸರ್‌ನ್ನು ತರಿಸುತ್ತದೆ. ಆದ್ದರಿಂದ ಪ್ರಾರಂಭಿಕ ಹಂತದಿಂದಲೇ ದುಶ್ಚಟಗಳಿಂದ ದೂರವಿರಬೇಕೆಂದು ತಿಳಿಸಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಜಿಲ್ಲಾ ಕಾರ್ಯಕ್ರಮಾಧಿಕಾರಿ ಡಾ॥ ರಾಘವನ್ ಜಿ.ಡಿ, ಆರ್ಥಿಕಾಧಿಕಾರಿ ದ್ಯಾಮನಗೌಡ ಮುದ್ದನಗೌಡ್ರು, ದಾವಣಗೆರೆ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾದ ಡಾ. ದಿವಾಕರ್ ನಾಯ್ಕ, ಕ್ರೀಡಾ ವಿಭಾಗದ ದೈಹಿಕ ಶಿಕ್ಷಣದ ಮುಖ್ಯಸ್ಥರಾದ ಡಾ. ಕೆ ವೆಂಕಟೇಶ, ಸಮಾಜಕಾರ್ಯ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಪ್ರದೀಪ್ ಬಿ ಎಸ್, ಕ್ರೀಡಾಧಿಕಾರಿಗಳಾದ ಡಾ. ವೀರಪ್ಪ ಬಿ.ಹೆಚ್, ಸಿ ಜಿ ಆಸ್ಪತ್ರೆ ದಂತ ವಿಭಾಗದ ಮುಖ್ಯಸ್ಥರು ಸಂಪನ್ಮೂಲ ವ್ಯಕ್ತಿಗಳಾದ ಡಾ॥ ತಿಪ್ಪೇಸ್ವಾಮಿ ಪಿ. ಎಂ, ಸತೀಶ್ ಕಲಹಾಳ್, ಸಮಾಜ ಕಾರ್ಯಕರ್ತ ದೇವರಾಜ್ ಕೆ.ಪಿ ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T